
ಕನ್ನಡ ದಿನಪತ್ರಿಕೆ
21 ಏಪ್ರಿಲ್ । ರವಿವಾರ
21 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 55 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಯತ್ನಾಳ್ ವಿರುದ್ಧ ವಾಗ್ದಾಳಿ ನಡೆಸಿದ ದಿಂಗಾಲೇಶ್ವರ ಶ್ರೀ



ಹುಬ್ಬಳ್ಳಿ: ನಮ್ಮ ಸಮಾಜದ ಅವನತಿಗಾಗಿ ನಿಂತಿರುವ ಬಹುದೊಡ್ಡ ವ್ಯಕ್ತಿ ಅದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಂದು ಫಕೀರೇಶ್ವರ ಮಠದ ದಿಂಗಾಲೇಶ್ವರ ಶ್ರೀಗಳು ಆರೋಪಿಸಿದ್ದಾರೆ. ದಿಂಗಾಲೇಶ್ವರ ಸ್ವಾಮೀಜಿ ಪೇಮೆಂಟ್ ಪಡೆದು ಚುನಾವಣೆಗೆ ಸ್ಪರ್ಧಿಸಿದ್ದಾರೆಂಬ ಯತ್ನಾಳ ಹೇಳಿಕೆಗೆ ಕಿಡಿಕಾರಿದರು.

ಶಾಸಕ ಯತ್ನಾಳ್ ಹೇಳಿಕೆಗೆ ಕೆಂಡವಾದ ದಿಂಗಾಲೇಶ್ವರ ಸ್ವಾಮೀಜಿ, ಆ ಕೆಲಸವನ್ನ ಅವರೇ ಮಾಡಿರುತ್ತಾರೆ. ಹೀಗಾಗಿ ಎಲ್ಲರೂ ಅದನ್ನೇ ಮಾಡಿರುತ್ತಾರೆಂದು ತಿಳಿದಿರುತ್ತಾರೆ ಎಂದು ತಿರುಗೇಟು ನೀಡಿದರು. ಅವರು ನಮ್ಮ ಮೇಲೆ ಅಷ್ಟೇ ಅಲ್ಲ, ಎಲ್ಲರ ಮೇಲೂ ಹರಿಹಾಯುತ್ತಾರೆ. ಅವರು ಇರುವುದೇ ಅದಕ್ಕೆ ಎಂದು ಲೇವಡಿ ಮಾಡಿದರು.

ಇವರಿಗೆ ಸಮಾಜದ ಬಗ್ಗೆ ಕಳಕಳಿ ಇಲ್ಲ: ಇವರು ಒಳ್ಳೆಯ ರಾಜಕಾರಣ ಮಾಡಿದ್ದರೆ, ನಮ್ಮವಂತವರು ಚುನಾವಣೆಗೆ ಬರುವ ಅವಶ್ಯಕತೆ ಇರುತ್ತಿರಲಿಲ್ಲ. ಇವರು ನಮ್ಮ ಕುರಿತು, ಸಮಾಜದ ಕುರಿತು, ಸ್ವಾಮೀಜಿಗಳ ಕುರಿತು ಹಗುರವಾಗಿ ಮಾತನಾಡುತ್ತಾರೆ.

ಇವರಿಗೆ ಸಮಾಜದ ಬಗ್ಗೆ ಕಳಕಳಿ ಇಲ್ಲ ಎನ್ನುವುದು ಅರ್ಥ ಆಗುತ್ತದೆ ಎಂದು ದಿಂಗಾಲೇಶ್ವರ ಶ್ರೀಗಳು ವಾಗ್ದಾಳಿ ನಡೆಸಿದರು.

ಯತ್ನಾಳ್ ಹೇಳಿಕೆ ವಿಚಾರಕ್ಕೆ ತಿರುಗೇಟು ನೀಡಿದ ಶ್ರೀಗಳು: ನನ್ನ ಬಗ್ಗೆ, ನನ್ನ ವ್ಯಕ್ತಿತ್ವದ ಬಗ್ಗೆ ಇಡೀ ರಾಜ್ಯಕ್ಕೆ ಗೊತ್ತಿದೆ. ಹೀಗಾಗಿ ಇವರ ಮಾತಿಗೆ ಬೆಲೆ ಕೊಡುವ ಅವಶ್ಯಕತೆ ಇಲ್ಲ. ದಿಂಗಾಲೇಶ್ವರ ಐದು ಸಾವಿರ ಮತ ಪಡೆಯಲ್ಲ ಎಂಬ ಯತ್ನಾಳ್ ಹೇಳಿಕೆ ವಿಚಾರಕ್ಕೆ ತಿರುಗೇಟು ನೀಡಿದ ಶ್ರೀಗಳು, ಅವರೇನೂ ಎಣಿಸಿ ಬಿಟ್ಟಿದ್ದಾರಾ? ಇಲ್ಲಿ ಸೋಲು ಗೆಲವಿನ ಪ್ರಶ್ನೆಗಳು ಪ್ರಮುಖವಾಗಿದ್ದು ಅಲ್ಲ. ಇವರು ತುಂಬಾ ಸಲ ಸೋತಿಲ್ವಾ, ಗೆದ್ದಿಲ್ವಾ..? ಸೋಲು ಗೆಲವಿನ ಲೆಕ್ಕಾಚಾರ ಅಲ್ಲ, ಹೋರಾಟ ಮುಖ್ಯವಾಗಿರುವಂತದ್ದು ಎಂದು ಯತ್ನಾಳ್ ವಿರುದ್ಧ ವಾಗ್ದಾಳಿ ನಡೆಸಿದರು.

## ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಲು ಸಂಚು, ಆದ್ರೆ ನನಗೆ ದೇಶದ ತಾಯಂದಿರ ಆಶೀರ್ವಾದ ಇದೆ: ಪ್ರಧಾನಿ ಮೋದಿ

ಚಿಕ್ಕಬಳ್ಳಾಪುರ: ನನ್ನನ್ನು ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಲು ದೊಡ್ಡ ದೊಡ್ಡ ನಾಯಕರು ಯತ್ನಿಸುತ್ತಿದ್ದಾರೆ. ಅದಕ್ಕಾಗಿ ದೊಡ್ಡ ಮಟ್ಟದಲ್ಲಿ ಸಂಚು ನಡೆಯುತ್ತಿದೆ. ಆದರೆ, ನನಗೆ ದೇಶದ ತಾಯಂದಿರ ಆಶೀರ್ವಾದ ಇದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ಹೇಳಿದ್ದಾರೆ.

ಚಿಕ್ಕಬಳ್ಳಾಪುರ ತಾಲೂಕಿನ ಅಗಲಗುರ್ಕಿ ಬಳಿ ಬಿಜೆಪಿ ಸಮಾವೇಶದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ವಿಕಸಿತ ಭಾರತಕ್ಕಾಗಿ ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸಿ. ಕರ್ನಾಟಕದ ಅಭಿವೃದ್ಧಿಗೆ ಕೇಂದ್ರದ ಎನ್‌ಡಿಎ ಸರ್ಕಾರ ಬದ್ಧವಾಗಿದೆ. ಕರ್ನಾಟಕದ ಉಜ್ವಲ ಭವಿಷ್ಯಕ್ಕಾಗಿ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ ಎಂದು ಮನವಿ ಮಾಡಿದರು.

ಇದೇ ವೇಳೆ ರಾಜ್ಯ ಕಾಂಗ್ರೆಸ್



ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಪ್ರಧಾನಿ ಮೋದಿ, ಈ ಹಿಂದೆ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಇದ್ದಾಗ ಕಿಸಾನ್ ಸಮ್ಮಾನ್ ಹಣದ ಜತೆಗೆ 2,000 ರೂ. ಸೇರಿಸಿ 4,000 ರೂಪಾಯಿಯನ್ನು ರೈತರಿಗೆ ನೀಡಲಾಗುತ್ತಿತ್ತು.

ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದ ಕೂಡಲೇ ಅದನ್ನು ಸ್ಥಗಿತಗೊಳಿಸಲಾಯಿತು.

ಇದರಿಂದಲೇ ಕಾಂಗ್ರೆಸ್ ರೈತ ವಿರೋಧಿ ಎಂಬುದು ಗೊತ್ತಾಗುತ್ತದೆ. ರೈತ ವಿರೋಧಿ ಕಾಂಗ್ರೆಸ್ಗೆ ಇಲ್ಲಿನ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಜನತೆಗೆ ಮಾಹಿತಿ ನೀಡಿದ ಪ್ರಧಾನಿ ಮೋದಿ, ನಾವು ಉಚಿತವಾಗಿ ಪಡಿತರ ನೀಡುತ್ತಿದ್ದೇವೆ, ಇದು ಮೋದಿ ಗ್ಯಾರಂಟಿ ಮತ್ತು ಮುಂದಿನ 5 ವರ್ಷವೂ ಉಚಿತವಾಗಿ ಪಡಿತರ ನೀಡುತ್ತೇವೆ ಎಂದು ಭರವಸೆ ನೀಡಿದರು.

ಉಚಿತವಾಗಿ ಬಡವರಿಗೆ ವೈದ್ಯಕೀಯ ಚಿಕಿತ್ಸೆ ಸಿಗಬಹುದು ಎಂದು ಯಾರೂ ಭಾವಿಸಿರಲಿಲ್ಲ. ಆದರೆ ಆಯುಷ್ಮಾನ್ ಭಾರತ್ ಯೋಜನೆ ಮೂಲಕ ನಾವು ಅದನ್ನು ಸಾಕಾರಗೊಳಿಸಿದ್ದೇವೆ. ಮೋದಿ ಸರ್ಕಾರದ ಅತಿದೊಡ್ಡ ಫಲಾನುಭವಿಗಳು ಎಸ್ಸಿ, ಎಸ್ಟಿ ಜನಾಂಗ ಹಾಗೂ ಬಡವರಾಗಿದ್ದಾರೆ. ಕಳೆದ 10 ವರ್ಷಗಳಲ್ಲಿ ಎಸ್‌ಸಿ–ಎಸ್‌ಟಿ ಸಮುದಾಯದ 25 ಕೋಟಿ ಮಂದಿಯನ್ನು ಬಡತನ ರೇಖೆಯಿಂದ ಮೇಲೆ ತಂದಿದ್ದೇವೆ ಎಂದರು.

## ನೇಹಾ ಮನೆಗೆ ಭೇಟಿ ನೀಡಿ, ಪೋಷಕರಿಗೆ ಧೈರ್ಯ ತುಂಬಿದ ಜಗದೀಶ್ ಶೆಟ್ಟರ್



ಬೆಳಗಾವಿ: ಹುಬ್ಬಳ್ಳಿ–ಧಾರವಾಡ ಪಾಲಿಕೆ ಸದಸ್ಯ ನಿರಂಜನ ಹಿರೇಮಠ ಅವರ ಮನೆಗೆ ಮಾಜಿ ಸಿಎಂ ಹಾಗೂ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಭೇಟಿ ನೀಡಿ, ನೇಹಾ ಅವರ ತಂದೆ ತಾಯಿಗೆ ಸಾಂತ್ವನ ಹೇಳಿದ್ದಾರೆ.

ನೇಹಾ ಹತ್ಯೆ ಖಂಡಿಸಿ ಮನ್ನೊಳ್ಳಿ ಪಟ್ಟಣದಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಬಳಿಕ ಅವರ ಮನೆಗೆ ಭೇಟಿ ನೀಡಿ, ನೇಹಾ ಪೋಷಕರಿಗೆ ಸಾಂತ್ವನ ಹೇಳಿದರು. ಈ ವೇಳೆ ಜಗದೀಶ್ ಶೆಟ್ಟರ್ ಬಳಿ ತಮ್ಮ ನೋವು ತೋಡಿಕೊಂಡಿರುವ ಪಾಲಿಕೆ ಸದಸ್ಯ ನೀರಂಜನ ಹೀರೆಮಠ್ ಅವರು, ನನ್ನ ಮಗಳು ತಾನಾಯಿತು ತನ್ನ ವಿದ್ಯಾಭ್ಯಾಸ ಆಯ್ತು ಎಂದು ಇರುತ್ತಿದ್ದಳು. ನೇಹಾ ಯಾರ ಜೊತೆನೂ ಸಲುಗೆ ಬೆಳೆಸಿರಲಿಲ್ಲ. ಕೊಲೆ ಮಾಡಿದವನ ಆಕೆ ಪ್ರತಿಸುತ್ತಿರಲಿಲ್ಲ. ಮಗಳ ಕೊಲೆ ಆದ ಮೇಲೆ ರಾಜ್ಯಾದ್ಯಂತ ಪ್ರತಿಭಟನೆಗಳು ಆಗುತ್ತಿರುವ ಹಿನ್ನೆಲೆ, ನೇಹಾ ಆ ಯುವಕನ ಜೊತೆ ಪ್ರತಿ ಮಾಡುತ್ತಿದ್ದಳು ಎಂದು ಸುಳ್ಳು ವದಂತಿಗಳು ಸೊಸಿಯಲ್ ಮೀಡಿಯಾದಲ್ಲಿ ವೈರಲ್ ಮಾಡುತ್ತಿದ್ದಾರೆ ಎಂದು ಕಣ್ಣೀರು ಹಾಕಿದ್ದಾರೆ.

ಜಗದೀಶ್ ಶೆಟ್ಟರ್ ಅವರು ಮಾತನಾಡಿ, ಈ ರೀತಿ ಘಟನೆಗಳು ಆಗಬಾರದಿತ್ತು, ಇದರ ಹಿಂದೆ ಯಾರೆ ಇದ್ದರು ಖಂಡಿತ ನ್ಯಾಯ ದೊರಕಿಸಿಕೊಡುತ್ತೇವೆ. ಈ ಪ್ರಕರಣದ ಬಗ್ಗೆ ಸೂಕ್ತ ತನಿಖೆ ಆಗುವ ವರೆಗೆ ಹೋರಾಟ ಮಾಡಿ, ನ್ಯಾಯ ದೊರಕಿಸಲು ಪ್ರಯತ್ನಿಸುತ್ತೇವೆ. ನೀವು ಧೈರ್ಯದಿಂದ ಇರಬೇಕು ಎಂದು ನೇಹಾ ಪೋಷಕರಿಗೆ ಜಗದೀಶ್ ಶೆಟ್ಟರ್ ಅವರು ಸಾಂತ್ವನ ಹೇಳಿದ್ದಾರೆ.

## ದೇಶಕ್ಕೆ ಮೋದಿ ಬೇಡವಾದರೆ ಭಾರತ ಪಾಕಿಸ್ತಾನವಾಗಲಿದೆ: ಮಾರುತಿ ಅಷ್ಟಗಿ



ಜೆಡಿಎಸ್ ಮುಖಂಡ ಮಾರುತಿ ಅಷ್ಟಗಿ ಚಿಕ್ಕೋಡಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಪರವಾಗಿ ಶನಿವಾರ ಪರಕನಹಟ್ಟಿ ಗ್ರಾಮದಲ್ಲಿ ಪ್ರಚಾರ ಮಾಡಿದರು

ಯಮಕನಮರಡಿ: 'ದೇಶಕ್ಕೆ ಮೋದಿ ಬೇಡವಾದರೆ ಭಾರತ ಪಾಕಿಸ್ತಾನವಾಗುವುದರಲ್ಲಿ ಸಂದೇಹವಿಲ್ಲ' ಎಂದು ಜೆಡಿಎಸ್‌ನ ಮಾರುತಿ ಅಷ್ಟಗಿ ಹೇಳಿದರು.

ಚಿಕ್ಕೋಡಿ ಲೋಕಸಭಾ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಪರವಾಗಿ ಶನಿವಾರ ಪರಕನಹಟ್ಟಿ, ಮಾವನೂರ, ಪಾಶ್ಚಾಪೂರ, ಹುದಲಿ, ಅಷ್ಠೆ ಸೇರಿದಂತೆ ಗ್ರಾಮದಲ್ಲಿ ಪ್ರಚಾರ ಸಭೆಯಲ್ಲಿ ಮಾತನಾಡಿ ಅವರು, ದೇಶಕ್ಕೆ ಮತ್ತೊಮ್ಮೆ ಮೋದಿ ಪ್ರಧಾನಿಯನ್ನಾಗಿಸಲು ಬಿಜೆಪಿಗೆ ಮತ ನೀಡಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಸು ಉದೋಶಿ, ರವಿ ಹಂಜಿ, ಅಮೀತ್ ದೇಶಪಾಂಡೆ, ಪರಶುರಾಮ ಬಸನಾಯಿಕ, ಸತೀಶ ಕಮತಿಗಿ, ಆನಂದ ಗಡದ, ಬಸು ಘೋಡಗೇರಿ, ಕೆಂಪಣ್ಣಾ ಪ್ರಭಾನಹಟ್ಟಿ ಇದ್ದರು.

## ಜಗದೀಶ್ ಶೆಟ್ಟರ್ ಬಲಿಕಾ ಬಕ್ರ ಎಂದ ಶಾಸಕ ಸವದಿ



ಬೆಳಗಾವಿ: ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಸೋಲಿಸುವ ಸಲುವಾಗಿಯೇ ಬೆಳಗಾವಿಗೆ ತಂದು ನಿಲ್ಲಿಸಲಾಗಿದೆ. ಜಗದೀಶ್ ಶೆಟ್ಟರ್ ಬಲಿಕಾ ಬಕ್ರ ಅಗಲಿದ್ದಾರೆ. ಇದೇ ರೀತಿ ಬಿಜೆಪಿ 4–5 ಕ್ಷೇತ್ರಗಳಲ್ಲಿ ಬಕ್ರಾಗಳನ್ನು ತಂದು ನಿಲ್ಲಿಸಿದೆ ಎಂದು ಅಥಣಿ ಶಾಸಕ ಲಕ್ಷ್ಮಣ್ ಸವದಿ ಹೇಳಿದರು.

ರಾಮದುರ್ಗ ಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ನಡೆದ ಬೃಹತ್ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಬಿಜೆಪಿಗರು ಮಾತು ಆಡಿದರೆ ಸಾಕು ಬರೀ ಸುಳ್ಳೇ ಆಡುತ್ತಾರೆ. ಸುಳ್ಳಿನಿಂದಲೇ ಅರಮನೆ ಕಟ್ಟಿ, 2014ರಿಂದ ಅಧಿಕಾರ ನಡೆಸುತ್ತಿದ್ದಾರೆ. ನಮ್ಮ ಮಣ್ಣು ನಮ್ಮ ಹಕ್ಕು ಎಂದು ರಾಣಿ ಚೆನ್ನಮ್ಮ ಬ್ರಿಟಿಷರ ವಿರುದ್ಧ ಹೋರಾಡಿದ್ದರು. ಅದೇ ರೀತಿ ನಮ್ಮ ಜಿಲ್ಲೆಗೆ ಹೊರ ಜಿಲ್ಲೆಯ ಅಭ್ಯರ್ಥಿ ಬೇಡ. ಮೋದಿ, ಬಿಎಸ್ ವೈ ಪ್ರಚಾರ ಮಾಡಿದ ಜಾಗಗಳಲ್ಲಿ ಬಿಜೆಪಿ ಸೋತಿದೆ. ಬೆಳಗಾವಿಯ ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಶತಸಿದ್ಧ ಎಂದು ಭವಿಷ್ಯ ನುಡಿದರು.

## ಒನಕೆ ಓಬವ್ವನ ರೂಪ ತಾಳಿ ಬಂದ ಡಿಕೆಶಿ ಪುತ್ರಿ





ಬೆಂಗಳೂರು: ಕರ್ನಾಟಕ ವೀರ ವನಿತೆಯರಲ್ಲಿ ಒಬ್ಬರೆಂದು ಪರಿಗಣಿಸಲಾಗಿರುವ, ಚಿತ್ರದುರ್ಗದ ಇತಿಹಾಸದಲ್ಲಿ ಅಜರಾಮರವಾಗಿ ಉಳಿದಿರುವ ಹೆಸರು ಒನಕೆ ಓಬವ್ವ. ಇದೀಗ ಕರ್ನಾಟಕದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪುತ್ರಿ ಐಶ್ವರ್ಯ ಶಿವಕುಮಾರ್ ಅವರು ಒನಕೆ ಓಬವ್ವ ಅವರ ವೇಷ ತೊಟ್ಟು ಫೋಟೋಶೂಟ್ ಮಾಡಿಕೊಂಡಿದ್ದಾರೆ.

ಇದಲ್ಲದೇ ನಾರಿ ಶಕ್ತಿಯ ಬಗ್ಗೆ ಸೋಶಿಯಲ್ ಮೀಡಿಯಾಗಳಲ್ಲಿ ಹಂಚಿಕೊಂಡಿದ್ದು, ಸದ್ಯ ಎಲ್ಲೆಡೆ ವೈರಲ್ ಆಗಿದೆ.

ಒನಕೆ ಓಬವ್ವನ ವೇಷ ತೊಟ್ಟು ಫೋಟೋ ಕ್ಲಿಕ್ಕಿಸಿಕೊಂಡಿರುವ ಐಶ್ವರ್ಯ ಸವಿಸ್ತಾರವಾಗಿ ನಾರಿ ಶಕ್ತಿಯ ಬಗ್ಗೆ ಕ್ಯಾಪ್ಷನ್ ಬರೆದುಕೊಂಡಿದ್ದಾರೆ.

"ಹೆಣ್ಣು ಅಬಲೆಯಲ್ಲ, ಎಲ್ಲವನ್ನೂ ಸಾಧಿಸಬಲ್ಲ ಶಕ್ತಿ ಆಕೆಗಿದೆ. ಧೈರ್ಯ, ಸಾಹಸದ ಮೂಲಕ ನಾರಿಶಕ್ತಿಯ ಪ್ರತೀಕವಾಗಿ ಒನಕೆ ಓಬವ್ವ ಅವರು ನಮಗೆ ಸ್ಫೂರ್ತಿಯಾಗಿದ್ದಾರೆ.

'ಧೈರ್ಯಂ ಸರ್ವತ್ರ ಸಾಧನಂ.' ಧೈರ್ಯ ಇದ್ದರೆ ಎಂತಹ ಸಮಸ್ಯೆ ಎದುರಾದರೂ ಜಯಿಸಬಹುದು ಎಂಬುದಕ್ಕೆ ಸಾಕ್ಷಿಯಾಗಿ ಒನಕೆ ಓಬವ್ವ ಅವರು ಇತಿಹಾಸ ಪುಟದಲ್ಲಿ ಅಜರಾಮರವಾಗಿದ್ದಾರೆ" ಎಂದು ಬರೆದುಕೊಂಡಿದ್ದಾರೆ.

## ಕೇಂದ್ರದ ವಿರುದ್ಧ ಚೊಂಬು ಹಿಡಿದು ಕಾಂಗ್ರೆಸ್ ವಿನೂತನ ಪ್ರತಿಭಟನೆ

ಬೆಂಗಳೂರು: ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯ, ಮೋಸ ಮಾಡುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಪಕ್ಷ ಶನಿವಾರ ವಿನೂತನ ಪ್ರತಿಭಟನೆ ನಡೆಸಿತು.

ನಗರದ ಮೇಖ್ರಿ ಸರ್ಕಲ್ ಬಳಿ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ನೇತೃತ್ವದಲ್ಲಿ 'ಚೊಂಬು ಹಿಡಿದು' ಕೇಂದ್ರದಿಂದ ರಾಜ್ಯಕ್ಕೆ ಸಿಕ್ಕಿದ್ದು ಕೇವಲ ಖಾಲಿ ಚೊಂಬು ಎಂದು ಆಕ್ರೋಶ ವ್ಯಕ್ತಪಡಿಸಲಾಯಿತು.

ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು, ಶಾಸಕ ಅರ್ಷದ್ ರಿಜ್ವಾನ್ ಸೇರಿದಂತೆ ಪಕ್ಷದ ಹಲವು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಸುರ್ಜೆವಾಲ, ಮೋದಿ ಮತ್ತು ಬಿಜೆಪಿಯವರು ಕರುನಾಡಿನ ಜನತೆಗೆ ಬಿಜೆಪಿ ಸರ್ಕಾರ ಚೊಂಬು ಕೊಟ್ಟಿದ್ದಾರೆ.

ಬರ ಪರಿಹಾರ ವಿಚಾರದಲ್ಲಿ 18 ಸಾವಿರ ಕೋಟಿ, 15ನೇ ಹಣಕಾಸು ಆಯೋಗದಿಂದ ನೀಡಬೇಕಿದ 62 ಸಾವಿರ ಕೋಟಿ ರೂ. ಚೊಂಬು ಕೊಟ್ಟಿದ್ದಾರೆ ಎಂದು ಕಿಡಿಕಾರಿದರು.

ಎಲ್ಲರ ಖಾತೆಗೆ 15 ಲಕ್ಷ ರೂಪಾಯಿ




ಹಾಕುತ್ತೇವೆ ಎಂದು ಹೇಳಿ ಮೋಸ ಮಾಡಿದ ಬಿಜೆಪಿ ಸರ್ಕಾರ ,ರೈತರ ಆದಾಯ ದ್ವಿಗುಣಗೊಳಿಸಲಿಲ್ಲ,

ನಾವು ಕಟ್ಟುವ ಪ್ರತಿ 100 ರೂ. ತೆರಿಗೆಯಲ್ಲಿ 13 ರೂ. ಮಾತ್ರ ವಾಪಸ್ ನೀಡುವ ಮೂಲಕ ಚೊಂಬು ನೀಡಿದೆ.

ರಾಜ್ಯದಿಂದ ಆಯ್ಕೆಯಾದ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ 27 ಜನ ಲೋಕಸಭಾ ಸದಸ್ಯರು ರಾಜ್ಯಕ್ಕೆ ನೀಡಿದ್ದು ಚೊಂಬು. ಇಷ್ಟೆಲ್ಲಾ ಚೊಂಬುಗಳನ್ನು ನೀಡಿರುವ ಬಿಜೆಪಿ ಪಕ್ಷಕ್ಕೆ ಈ ಮುಂಬರುವ ಲೋಕಸಭಾ ಚುನಾವಣೆಯಲ್ಲಿ 6.5ಕೋಟಿ ಕನ್ನಡಿಗರ ಸಹ ಅದೇ ಚೊಂಬನ್ನು ನೀಡಿ ಮನೆಗೆ ಕಳುಹಿಸಲಿದ್ದಾರೆ ಎಂದರು.

ಅದೇ ಸಮಯದಲ್ಲಿ ನಮ್ಮ ತೆರಿಗೆ, ಹಕ್ಕು, ಬರ ಪರಿಹಾರ ನೀಡದಿರುವ ಬಗ್ಗೆ ಹೇಳಿಕೆ ನೀಡಬೇಕಾಗಿದೆ.

ಭದ್ರಾ ನೀರಿನ ಯೋಜನೆಗೆ ಬಜೆಟ್‌ನಲ್ಲಿ ಮೀಸಲಿಡಬೇಕಾದ ಹಣವನ್ನು ಏಕೆ ನೀಡಲಿಲ್ಲ? ಏನೇ ವಿವಾದಗಳಿದ್ದರೂ ಕಾನೂನು ಕ್ರಮ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

## ಅಣ್ಣಾಸಾಹೇಬ ಜೊಲ್ಲೆಗೆ ಬೆಂಬಲ: ಪ್ರತಾಪರಾವ್ ಪಾಟೀಲ



ಚಿಕ್ಕೋಡಿ: ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆಯವರಿಗೆ ಜೆಡಿ–ಎಸ್ ಪಕ್ಷ ಬೆಂಬಲಿಸಲಿದೆ ಎಂದು ಜೆಡಿಎಸ್ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷ ಪ್ರತಾಪರಾವ್ ಪಾಟೀಲ ಮಾತನಾಡಿದರು

ರಾಯಬಾಗ: ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಅವರಿಗೆ ಜೆಡಿಎಸ್ ಪಕ್ಷ ಸಂಪೂರ್ಣ ಬೆಂಬಲ ಸೂಚಿಸಲಿದೆ ಎಂದು ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷ ಪ್ರತಾಪರಾವ್ ಪಾಟೀಲ ಹೇಳಿದರು. ತಾಲ್ಲೂಕಿನ ಬ್ಯಾಕುಡ ಗ್ರಾಮಕ್ಕೆ ಆಗಮಿಸಿದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆಯವರನ್ನು ಸ್ವಾಗತಿಸಿ ಅವರು ಮಾತನಾಡಿದರು. ನರೇಂದ್ರ ಮೋದಿಯವರನ್ನು ಮೂರನೇ ಬಾರಿಗೆ ಪ್ರಧಾನ ಮಂತ್ರಿಯನ್ನಾಗಿಸುವ ಉದ್ದೇಶದಿಂದ ಬಿಜೆಪಿಗೆ ಬೆಂಬಲಿಸಲಿದ್ದೇವೆ ಎಂದರು.

ಅಣ್ಣಾಸಾಹೇಬ ಜೊಲ್ಲೆ ಮಾತನಾಡಿ, ಜೆಡಿಎಸ್ ರಾಷ್ಟ್ರೀಯ ಉಪಾಧ್ಯಕ್ಷ ಪ್ರತಾಪರಾವ್ ಪಾಟೀಲ ಹಾಗೂ ಪುತ್ರ ಶಿವರಾಜ್ ಪಾಟೀಲರ ಬೆಂಬಲದಿಂದ ಪಕ್ಷಕ್ಕೆ, ನನಗೆ ಆನೆ ಬಲ ಬಂದಂತಾಗಿದೆ' ಎಂದರು.

# ಜೊಲ್ಲೆಗೆ ಕಬ್ಬಿಣದ ಕಡಲೆಯಾದ ಚಿಕ್ಕೋಡಿ ಲೋಕಸಭಾ ಕ್ಷೇತ್ರ

ಬೆಳಗಾವಿ: 'ಬಿಜೆಪಿಯವ್ರ ಹೇಳ್ತಾರಂತ ಮೋದಿಗ್ಯಾಕ್ ವೋಟ್ ಹಾಕ್ಬೇಕೂ ಇವ್ರ ಏನ್ ಮಾಡೋರಿದ್ದಾರೆ ಅನ್ನೋದನ್ನ್ ಹೇಳ್ಳಿ, ಬರಾ, ನೆರಿ ಬಂದ್ರೂ ತಿರ್ಗ ನೋಡಿಲ್ಲಾ, ವೋಟು ಕೇಳಾಕೆ ಮರಿಯೂದಿಲ್ಲಾ, ಹ್ಯಾಂಗೆ ವೋಟ್ ಹಾಕೋದು. ಸದ್ಯ ಇರಾವ್ ಎಂಪಿ ನಮ್ಮ ಸಮಸ್ಯೆ ಬಗೆ ಹರಿಸಿಲ್ಲರಿ... ಇವು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ನೊಂದ ಜನರ ಮಾತುಗಳಿವು.

ಕಡುಬೇಸಗೆಯ ಸುಡು ತಾಪದ ನಡುವೆ ಕ್ಷೇತ್ರದಲ್ಲಿ ಚುನಾವಣೆ ಕಾವು ಏರತೊಡಗಿದೆ. ಕೈ ಹೈಕಮಾಂಡ್ ಸೂಚನೆಯಂತೆ ಕಾಂಗ್ರೆಸ್‌ನಿಂದ ಪ್ರಿಯಂಕಾ ಜಾರಕಿಹೊಳಿ ಸ್ಪರ್ಧೆಗಿಳಿದಿದ್ದರೆ, ಮತ್ತೊಮ್ಮೆ ಬಿಜೆಪಿಯಿಂದ ಹಾಲಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಕಣಕ್ಕೆ ಇಳಿದಿದ್ದಾರೆ. ಆದರೆ ಇರಲ್ಲಿ ಮುಖ್ಯವಾಗಿ ಈ ಬಾರಿ ಹಾಲಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ವಿರುದ್ಧ ವಿರೋಧಿ ಅಲೆ ಶುರುವಾಗಿದೆ. ಅಣ್ಣಾಸಾಹೇಬ್ ಜೊಲ್ಲೆ ಅವರು ಕ್ಷೇತ್ರದಲ್ಲಿ ಇನ್ನು ಹೇಳಿಕೊಳ್ಳುವಂಥ ದೊಡ್ಡ ಯೋಜನೆ, ಉದ್ಯೋಗ ಸೃಷ್ಟಿಸಿಲ್ಲ. ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ 8 ಕ್ಷೇತ್ರಗಳ ಪೈಕಿ 5 ರಲ್ಲಿ ಕಾಂಗ್ರೆಸ್ ಶಾಸಕರು ಇರೋವದರಿಂದ ಅಣ್ಣಾಸಾಹೇಬ್ ಜೊಲ್ಲೆಯವರಿಗೆ ಈ ಬಾರಿ ಗೆಲುವು ಕಬ್ಬಿಣದ ಕಡಲೆ ಆಗಲಿದೆ ಎನ್ನುವ ಲೆಕ್ಕಾಚಾರಗಳು ಕ್ಷೇತ್ರದಲ್ಲಿ ಚರ್ಚೆ ನಡೆಯುತ್ತಿವೆ.

ಪವರ್ ಸೆಂಟರ್ ಆದ ಬೆಳಗಾವಿ ಜಿಲ್ಲೆ: ರಾಜ್ಯ ರಾಜಕಾರಣ ಬೇರೆ, ಆದರೆ ಬೆಳಗಾವಿ ರಾಜಕಾರಣ ಒಂದು ಪವರ್ ಸೆಂಟರ್, ಬೆಳಗಾವಿಯಿಂದಲೇ ಸರ್ಕಾರ ಉರುಳಿಸುವುದು ಬೆಳಗಾವಿಯಿಂದಲೇ ಸರ್ಕಾರ ರಚಿಸುವುದರ ಮಟ್ಟಿಗೆ ಬೆಳಗಾವಿ ರಾಜಕಾರಣ ವರ್ಚಸ್ಸು ಪಡೆದುಕೊಂಡಿದೆ. ಸದ್ಯಕ್ಕೆ ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಪ್ರತಿಷ್ಠಿತ ಎರಡು ಮನೆತನಗಳ ನಡುವೆ ರಾಜಕೀಯ ಯುದ್ಧ ಪ್ರಾರಂಭವಾಗಿದ್ದು, ಮತದಾರರಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಅದರಲ್ಲು ಸಚಿವ ಸತೀಶ್ ರಾಜಕೀಯ ವರ್ಚಸ್ಸು ನೆಚ್ಚಿರುವ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಜಿಲ್ಲಾದ್ಯಂತ ತಂದೆ ಸತೀಶ್ ಅವರ ವರ್ಚಸ್ಸು ಈ ಬಾರಿ ಪ್ರಿಯಂಕಾ ಗೆಲುವಿಗೆ ಕಾರಣ ಆಗಬಹುದು ಎನ್ನಲಾಗುತ್ತಿದೆ.

ಜನರ ಕೈಗೆ ಸುಲಭವಾಗಿ ಸಿಗದ ಜೊಲ್ಲೆ: ಕ್ಷೇತ್ರದ ವ್ಯಾಪ್ತಿಯಲ್ಲಿ ರಸ್ತೆ, ಕುಡಿಯುವ ನೀರು ಮೊದಲಾಗಿ ಮೂಲಸೌಕರ್ಯಗಳ ಅಭಿವೃದ್ಧಿ ಆಗಿದ್ದರೂ ಮಹತ್ವದ






ರೈಲ್ವೆ ಮಾರ್ಗಗಳ ಬಗ್ಗೆ ನಿರ್ಲಕ್ಷ್ಯ ವಹಿಸಿರುವುದು, ಕೈಗಾರಿಕೆಗಳ ಅಭಿವೃದ್ಧಿ ನಿರೀಕ್ಷಿತ ಪ್ರಮಾಣದಲ್ಲಿ ಆಗದಿರುವುದು ಜನರಲ್ಲಿ ಅಸಮಾಧಾನ ಮೂಡಿಸಿದೆ. ಅಲ್ಲದೇ ಬೆಳಗಾವಿ ಜಿಲ್ಲೆ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಹೆಸರುವಾಸಿಯಾಗಿದ್ದರೂ ಬಹುತೇಕ ಕೈಗಾರಿಕೆಗಳು ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿವೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಣಗಲಾ ಹೊರತುಪಡಿಸಿ ಪ್ರಮುಖ ಕೈಗಾರಿಕಾ ವಸಾಹತು ಇಲ್ಲ. ರಾಷ್ಟ್ರೀಯ ಹೆದ್ದಾರಿ, ರೈಲು ಮಾರ್ಗಗಳ ಸಂಪರ್ಕವಿದ್ದು ಕೈಗಾರಿಕೆ ಪ್ರದೇಶಗಳ ಅಭಿವೃದ್ಧಿಗೆ ಅವಕಾಶಗಳು ಹೇರಳವಾಗಿ ದ್ದರೂ ಸಂಸದರು ಸ್ಪಂದಿಸುತ್ತಿಲ್ಲಎಂಬ ಆರೋಪವಿದೆ. ಅಲ್ಲದೇ ಜನರ ಕೈಗೆ ಅಷ್ಟು ಸುಭವಾಗಿ ಚಿಕ್ಕೋಡಿ ಸಂಸದರು ಸಿಗಲ್ಲ ಎಂಬ ಆರೋಪ ಅಣ್ಣಾಸಾಹೇಬ್ ಜೊಲ್ಲೆ ಮೇಲೇ ಕೇಳಿ ಬರುತ್ತಿದೆ.

ಪತ್ನಿ ಕ್ಷೇತ್ರಕ್ಕೆ ಅನುದಾನ ಮೀಸಲಿಟ್ಟ ಎಂಪಿ: ಕೇವಲ ಮೋದಿ ಮುಖ ನೋಡಿ ಮತ ನೀಡಿದ್ದ ಚಿಕ್ಕೋಡಿ ಜನರು ಸಂಸದರ ಕಾರ್ಯವೈಖರಿಗೆ ಬೇಸತ್ತು ಕಾಂಗ್ರೆಸ್ ನತ್ತ ಮುಖ ಮಾಡುತ್ತಿದ್ದಾರೆ. ಅಷ್ಟೇ ಅಲ್ಲದೆ, ಸಂಸದರ ಅನುದಾನದ ಅಡಿಯಲ್ಲಿ ಬಂದ ಹಣವನ್ನು ಕೇವಲ ಪತ್ನಿ ಪ್ರತಿನಿಧಿಸುವ ನಿಪ್ಪಾಣಿ ಕ್ಷೇತ್ರದ ಅಭಿವೃದ್ಧಿಗೆ ಸೀಮಿತ ಮಾಡಿದ್ದರ ಪರಿಣಾಮ ಜನಾಕ್ರೋಶವೂ ವ್ಯಕ್ತವಾಗುತ್ತಿದೆ. ಈ ಎಲ್ಲ ಕಾರಣಗಳಿಂದ ಈ ಬಾರಿ ಚಿಕ್ಕೋಡಿಯಲ್ಲಿ ಕಮಲ ಕಿತ್ತೊಗೆಯಲು ಮತದಾರರು ರೆಡಿಯಾಗಿದ್ದಾರೆ ಎಂಬ ಚರ್ಚೆ ಜೋರಾಗಿ ಕೇಳಿ ಬರುತ್ತಿದೆ.

ಚಿಕ್ಕೋಡಿ ಲೋಕಸಭಾ ಕ್ಷೇತ್ರ: ಚಿಕ್ಕೋಡಿ ಲೋಕಸಭೆ ವ್ಯಾಪ್ತಿ ಒಟ್ಟು 17,41,758 ಮತದಾರರಿದ್ದು, ಅದರಲ್ಲಿ ಪುರುಷರು 8,75,953 ಮತದಾರರು ಇದ್ದರೆ 8,65,731 ಮಹಿಳಾ ಮತದಾರರು ಹೊಂದಿದ್ದಾರೆ ಜೊತೆಗೆ 74 ಇತರ ಮತದಾರರು ಇದ್ದಾರೆ. ಜಾತಿವಾರು ಲೆಕ್ಕಾಚಾರದ ವಿವರ ನೋಡವುದಾದರೆ, ಲಿಂಗಾಯತ: 4,10,000, ಕುರುಬ: 1,70,000, ಎಸ್ ಸಿ: 1,65,000, ಎಸ್ ಟಿ : 90,000, ಮುಸ್ಲಿಂ: 1,80,000, ಜೈನ್: 1,30,000, ಮರಾಠ: 1,70,000, ಇತರ ಮತದಾರರು: 2,55,000 ಜನರಿದ್ದಾರೆ. ಇಲ್ಲಿ ಲಿಂಗಾಯಿತ ಮತದಾರರರೇ ನಿರ್ಣಾಯಕರು.

ಕೃಷಿಗೆ ನೀರಾವರಿ ಒದಗಿಸುವಲ್ಲಿ ವಿಫಲ: ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ ಒಂದು ಭಾಗದಲ್ಲಿ ಅತಿ ವೃಷ್ಟಿಯಿಂದ ಜನ ಬಸವಳಿದು ಹೋಗುತ್ತಿದ್ದರೆ ಇನ್ನೊಂದು ಭಾಗದಲ್ಲಿ ಜನ ಅನಾವೃಷ್ಟಿಯಿಂದ ಹೊರಬರಲಾರದೇ ಒದ್ದಾಡುತ್ತಿದ್ದಾರೆ. ಕ್ಷೇತ್ರದಲ್ಲಿ ದೂಧಗಂಗಾ ವೇದಗಂಗಾ ಕೃಷ್ಣಾದಂತ ದೊಡ್ಡ ನದಿಗಳು ಹದಿದಿದ್ದರೂ ಸಮರ್ಪಕ ನೀರಾವರಿ ವ್ಯವಸ್ಥೆ ಕಲ್ಪಿಸುವಲ್ಲಿ ಹಾಲಿ ಎಂಪಿ ವಿಫಲರಾಗಿರುವುದು ಸುಳ್ಳಲ್ಲ. ಸದ್ಯ ಎರಡು ಮನೆತನಗಳ ಮಧ್ಯೆ ನಡೆದ ರಾಜಕೀಯದ ಜಂಗಿ ಕುಸ್ತಿಯಲ್ಲಿ ಅಣ್ಣಾಸಾಹೇಬ್ ಜೊಲ್ಲೆಯವರಿಗೆ ಮಾತ್ರ ಚಿಕ್ಕೋಡಿ ಲೋಕಸಭಾ ಕ್ಷೇತ್ರ ಮಾತ್ರ ಕಬ್ಬಿಣದ ಕಡಲೆಯಾಗಿರುವುದಂತು ಸುಳ್ಳಲ್ಲ.



## ಗ್ಯಾರಂಟಿ ಯೋಜನೆಗಳ ಬಗ್ಗೆ ಟೀಕೆ: ಬಿ ವೈ ವಿಜಯೇಂದ್ರ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು

ಬೆಂಗಳೂರು: ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಟೀಕಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ(ಕೆಪಿಸಿಸಿ) ಶನಿವಾರ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ಏಪ್ರಿಲ್ 17 ರಂದು ಮಂಡ್ಯ ಮತ್ತು ಚಿಕ್ಕಬಳ್ಳಾಪುರದಲ್ಲಿ ಚುನಾವಣಾ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ವಿಜಯೇಂದ್ರ ಅವರು, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗೃಹಜ್ಯೋತಿ, ಗೃಹಲಕ್ಷ್ಮಿ, ಯುವನಿಧಿ, ಶಕ್ತಿ ಯೋಜನೆ ಮತ್ತು ಅನ್ನಭಾಗ್ಯ ಎಂಬ ಐದು ಗ್ಯಾರಂಟಿಗಳಿಂದ ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಹೇಳಿರುವುದಾಗಿ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗೆ ಬರೆದ ಪತ್ರದಲ್ಲಿ ಕಾಂಗ್ರೆಸ್ ಆರೋಪಿಸಿದೆ.

ಐದು ಗ್ಯಾರಂಟಿಗಳಿಂದಾಗಿ ರಾಜ್ಯ ಸರ್ಕಾರ ದಿವಾಳಿಯಾಗಿದೆ ಮತ್ತು ಕರ್ನಾಟಕದಲ್ಲಿ ಮತದಾರರು ಬಿಜೆಪಿ ಅಭ್ಯರ್ಥಿಗಳ ಪರವಾಗಿ ಮತ ಚಲಾಯಿಸದಿದ್ದರೆ, ಲೋಕಸಭೆ ಚುನಾವಣೆಯ ನಂತರ ಐದು ಗ್ಯಾರಂಟಿಗಳನ್ನು ನಿಲ್ಲಿಸುತ್ತಾರೆ. ಅಲ್ಲದೆ ಲೋಕಸಭೆ ಚುನಾವಣೆಯ ನಂತರ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ವಿಜಯೇಂದ್ರ ಹೇಳಿದ್ದಾರೆ ಎಂದು ಕೆಪಿಸಿಸಿ ಪತ್ರದಲ್ಲಿ ಆರೋಪಿಸಿದೆ.

ವಿಜಯೇಂದ್ರ ಅವರು ಕರ್ನಾಟಕದ ಮತದಾರರಿಗೆ ಅದರಲ್ಲೂ ಮುಖ್ಯವಾಗಿ ಮಂಡ್ಯ ಮತ್ತು ಚಿಕ್ಕಬಳ್ಳಾಪುರದ ಮತದಾರರಿಗೆ ಬೆದರಿಕೆ ಹಾಕಿದ್ದಾರೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

"ಬಿವೈ ವಿಜಯೇಂದ್ರ ಅವರ ಹೇಳಿಕೆಯು ಚುನಾವಣಾ ನೀತಿ ಸಂಹಿತೆ, ಪ್ರಜಾಪ್ರತಿನಿಧಿ ಕಾಯ್ದೆ 1951 ರ ನಿಬಂಧನೆಗಳು ಮತ್ತು ಭಾರತೀಯ ದಂಡ ಸಂಹಿತೆಯ ನಿಬಂಧನೆಗಳನ್ನು ಉಲ್ಲಂಘಿಸುತ್ತದೆ" ಎಂದು ಕಾಂಗ್ರೆಸ್ ಪ್ರತಿಪಾದಿಸಿದೆ.

ಕರ್ನಾಟಕದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಯ ಹಿತದೃಷ್ಟಿಯಿಂದ ಬಿಜೆಪಿ ರಾಜ್ಯಾಧ್ಯಕ್ಷರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಕಾನೂನು ಕ್ರಮ ಜರುಗಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಕೆಪಿಸಿಸಿ ಚುನಾವಣಾ ಸಮಿತಿ ಒತ್ತಾಯಿಸಿದೆ.

# ಲೋಕಸಭೆ ಚುನಾವಣೆ ನಂತರ ಬಿಜೆಪಿಯ ಆಂತರಿಕ ಕಲಹ ಸ್ಫೋಟ; ಬೊಮ್ಮಾಯಿ, ಸೋಮಣ್ಣ ಸೋಲಿಸಲು ಸಂಚು: ಲಕ್ಷ್ಮಣ ಸವದಿ

ಬೆಳಗಾವಿ: ಬದಲಾದ ರಾಜಕೀಯ ಸನ್ನಿವೇಶಗಳಲ್ಲಿ ಬಿಜೆಪಿಯ ಕಟ್ಟಾ ನಾಯಕ ಮತ್ತು ಆರ್‌ಎಸ್‌ಎಸ್‌ಗೆ ನಿಕಟವಾಗಿರುವ ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ್ ಸವದಿ, ಕಳೆದ ವರ್ಷ ಕಾಂಗ್ರೆಸ್ ಸೇರ್ಪಡೆಯಾದರು, ರಾಜ್ಯ ಬಿಜೆಪಿಯಲ್ಲಿ ಉಲ್ಬಣಗೊಂಡಿರುವ ಆಂತರಿಕ ಕಲಹವು ಕೊತ ಕೊತ ಕುದಿಯುತ್ತಿದ್ದು ಲೋಕಸಭೆ ಚುನಾವಣೆಯ ನಂತರ ಸ್ಫೋಟಗೊಳ್ಳಲಿದೆ ಎಂದು ಲಕ್ಷ್ಮಣ ಸವದಿ ಹೇಳಿದ್ದಾರೆ



ಚಿಕ್ಕೋಡಿಯಲ್ಲಿ ಬಿರುಸಿನ ಚುನಾವಣಾ ಪ್ರಚಾರದಲ್ಲಿರುವ ಸವದಿ ಶುಕ್ರವಾರ ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಜೊತೆ ಮಾತನಾಡಿದರು. ಬಿಜೆಪಿಯಲ್ಲಿ ಭಾರೀ ಆಂತರಿಕ ಕಲಹ ನಡೆಯುತ್ತಿದೆ ಎಂಬುದು ನಿಮಗೆ ತಿಳಿದಿರಬೇಕು. ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ ಪುತ್ರ ಬಿಜೆಪಿ ಅಭ್ಯರ್ಥಿ ರಾಘವೇಂದ್ರ ಅವರನ್ನು ಸೋಲಿಸುವ ಉದ್ದೇಶದಿಂದ ಕೆಎಸ್ ಈಶ್ವರಪ್ಪ ಶಿವಮೊಗ್ಗ ಕ್ಷೇತ್ರದಿಂದ (ಸ್ವತಂತ್ರವಾಗಿ) ಸ್ಪರ್ಧಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಬಿಜೆಪಿಯ ಪ್ರಲ್ಹಾದ್ ಜೋಶಿ ಅವರನ್ನು ಸೋಲಿಸುವ ಏಕೈಕ ಗುರಿಯೊಂದಿಗೆ ದಿಂಗಾಲೇಶ್ವರ ಸ್ವಾಮಿ (ಸ್ವತಂತ್ರ) ಸ್ಪರ್ಧಿಸಿದ್ದಾರೆ. ಜೋಶಿ ವಿರುದ್ಧ ದಿಂಗಾಲೇಶ್ವರ ಸ್ವಾಮಿ ಸ್ಪರ್ಧಿಸಲು ಶೆಟ್ಟರ್ ಮತ್ತು ಯಡಿಯೂರಪ್ಪ ಅವರೇ ಕಾರಣ ಎಂದು ಪುನರುಚ್ಚರಿಸಿದರು. ಬಿಜೆಪಿಯಲ್ಲಿನ ಆಂತರಿಕ ಕಲಹ ವ್ಯಾಪಕವಾಗಿ ಹರಡುತ್ತಿದ್ದು, ಮುಂಬರುವ ಚುನಾವಣೆಯಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಮತ್ತು ಮಾಜಿ ಸಚಿವ ವಿ.ಸೋಮಣ್ಣ ಅವರನ್ನು ಸೋಲಿಸಲು ಕೇಸರಿ ಪಕ್ಷದೊಳಗೆ ಪ್ರಯತ್ನಗಳು ನಡೆಯುತ್ತಿವೆ ಎಂದಿದ್ದಾರೆ.

ಚುನಾವಣೆಗೆ ಮುನ್ನ ರಾಜ್ಯದ ನೆಲದ ಪರಿಸ್ಥಿತಿ ಮತ್ತು ಜನರ ನಾಡಿಮಿಡಿತವನ್ನು ಗಮನಿಸಿದರೆ ಕಾಂಗ್ರೆಸ್ ಮೇಲುಗೈ ಸಾಧಿಸುವುದು ಖಚಿತ. ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚಿನ ಸ್ಥಾನಗಳೊಂದಿಗೆ 20 ಕ್ಷೇತ್ರಗಳನ್ನು ಕಾಂಗ್ರೆಸ್ ಗೆಲ್ಲುವ ಗುರಿ ಹೊಂದಿದೆ. ಉತ್ತರ ಕರ್ನಾಟಕದಲ್ಲಿ ಬೀದರ್, ಕಲಬುರಗಿ, ರಾಯಚೂರು, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಚಿಕ್ಕೋಡಿ ಮತ್ತು ಕಾರವಾರದಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ಸವದಿ ಹೇಳಿದರು. ಬಿಜೆಪಿ ಹಲವು ಸ್ಥಾನಗಳನ್ನು ಕಳೆದುಕೊಳ್ಳಲಿದೆ. ಅವರು ಮೊದಲು ಶಿವಮೊಗ್ಗ ಕ್ಷೇತ್ರವನ್ನು ಗೆಲ್ಲಲಿ ಎಂದರು.

ಈ ಬಾರಿ ಕಾಂಗ್ರೆಸ್‌ಗೆ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ಉತ್ತಮ ಅವಕಾಶಗಳಿವೆ, ಏಕೆಂದರೆ ಕಳೆದ 10 ವರ್ಷಗಳಲ್ಲಿ ಕೇಂದ್ರದ ಬಿಜೆಪಿ ಸರ್ಕಾರದ ವೈಫಲ್ಯಗಳಿಂದ ಜನರು ಅಸಮಾಧಾನಗೊಂಡಿದ್ದಾರೆ ಎಂದು ಸವದಿ ಹೇಳಿದರು. ಅದೇ ಸಮಯದಲ್ಲಿ, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಜನರು ಪ್ರಭಾವಿತರಾಗಿದ್ದಾರೆ. ಜನಸಾಮಾನ್ಯರು ಗ್ಯಾರಂಟಿಗಳಿಂದ ಸಂತೋಷವಾಗಿದ್ದಾರೆ. 80 ರಿಂದ 85 ರಷ್ಟು ಮಹಿಳೆಯರು ರಾಜ್ಯದಲ್ಲಿ ಕಾಂಗ್ರೆಸ್‌ಗೆ ಮತ ಹಾಕಲು ಸಿದ್ಧರಿದ್ದಾರೆ ಎಂದು ಹೇಳಿದರು.

ದೇಶದಲ್ಲಿ ಮೋದಿ ಅಲೆ ಸಂಪೂರ್ಣ ಕ್ಷೀಣಿಸಿದೆ. ಇಂದು ನೆಲದ ಪರಿಸ್ಥಿತಿ ವಿಭಿನ್ನವಾಗಿದೆ. ಕೇಂದ್ರದಲ್ಲಿ ಅಧಿಕಾರಕ್ಕೆ ಬರುವ ಮೊದಲು, ಬಿಜೆಪಿ ನಾಯಕತ್ವವು 'ಗುಜರಾತ್ ಮಾದರಿ' ಎಂದು ಕರೆಯಲ್ಪಡುವದನ್ನು ಇಡೀ ದೇಶಕ್ಕೆ ವಿಸ್ತರಿಸುವುದಾಗಿ ಹೇಳಿದೆ. ಬಿಜೆಪಿ ಅಧಿಕಾರಕ್ಕೆ ಬರಲು ಭಾರತದ ನದಿಗಳ ಜೋಡಣೆ, ವಿದೇಶಿ ಬ್ಯಾಂಕ್‌ಗಳ ಕಪ್ಪುಹಣ ವಾಪಸ್ ತರುವುದು, ಪ್ರತಿ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಜಮಾ ಮಾಡುವುದು, ರೈತರ ಆದಾಯ ದ್ವಿಗುಣಗೊಳಿಸುವುದು ಇತ್ಯಾದಿ ಭರವಸೆಗಳನ್ನು ಜನರ ಮನಸ್ಸಿನಲ್ಲಿ ಮೂಡಿಸಿತು.

ಸಂಘ ಪರಿವಾರದ ಕಾರ್ಯಕರ್ತ ಚಕ್ರವರ್ತಿ ಸೂಲಿಬೆಲೆ ಮೋದಿ ಪ್ರಧಾನಿಯಾಗುವ ಮೊದಲು ಬಿರುಸಿನ ಪ್ರಚಾರ ನಡೆಸುತ್ತಿದ್ದರು. ಮೋದಿ ಸರಕಾರ ಕಪ್ಪುಹಣವನ್ನು ಭಾರತಕ್ಕೆ ಮರಳಿ ತಂದರೆ ದೇಶದೆಲ್ಲೆಡೆ ರಸ್ತೆಗಳು ಚಿನ್ನದ ಲೇಪಿತವಾಗಲಿವೆ ಎಂದು ಹೇಳಿದ್ದರು. ಜಪಾನ್ ಮತ್ತು ಚೀನಾದಲ್ಲಿ ಓಡುತ್ತಿರುವ ಬುಲೆಟ್ ರೈಲುಗಳು ಭಾರತದಲ್ಲಿ ಪ್ರಾರಂಭವಾಗುತ್ತವೆ. ನಂತರ ಬೆಳಗಾವಿ ನಗರದಿಂದ ದೆಹಲಿಗೆ ಎರಡು ಗಂಟೆಗಳಲ್ಲಿ ತಲುಪಬಹುದು ಎಂದು ಸೂಲಿಬೆಲೆ ಹೇಳಿದ್ದರು. ಡಾಲರ್ ದರವು ಭಾರತೀಯ ರೂಪಾಯಿಗಿಂತ ಕಡಿಮೆಯಿರುತ್ತದೆ ಮತ್ತು ಪೈಪ್‌ಲೈನ್‌ಗಳ ಮೂಲಕ ಗ್ಯಾಸ್ ನೀಡಬಹುದು ಎಂದು ಸೂಲಿಬೆಲೆ ಹೇಳಿದರು, ಕಳೆದ 10 ವರ್ಷಗಳಲ್ಲಿ ಬಿಜೆಪಿ ನೀಡಿದ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ ಎಂದು ಜನರಿಗೆ ತಿಳಿದಿದೆ ಎಂದು ಸವದಿ ಹೇಳಿದರು.

ರಾಜ್ಯ ರಾಜಕೀಯದಲ್ಲಿ ತಮ್ಮ ಭವಿಷ್ಯದ ಬಗ್ಗೆ ಮಾತನಾಡಿದ ಸವದಿ ಲೋಕಸಭೆ ಚುನಾವಣೆಯ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಪುಟಕ್ಕೆ ಪ್ರವೇಶಿಸುವ ಸುಳಿವು ನೀಡಿದ್ದಾರೆ. ಶೆಟ್ಟರ್ ಅವರು ಬಿಜೆಪಿಗೆ ಮರಳುವ ಆತುರದ ನಿರ್ಧಾರದ ಬಗ್ಗೆ ಮಾತನಾಡಿದ ಸವದಿ, "ನಾವು ಸ್ವಲ್ಪ ತಾಳ್ಮೆಯಿಂದಿರಬೇಕು. ನಾನು ಇತ್ತೀಚೆಗಷ್ಟೇ ಕಾಂಗ್ರೆಸ್‌ಗೆ ಸೇರಿದ್ದೇವೆ. ಇಷ್ಟು ಬೇಗ ನಾನು ಹೆಚ್ಚು ನಿರೀಕ್ಷಿಸಬಾರದು. ಸಂಬಳ ಪಡೆಯುವ ಮೊದಲು ನಿಮಗೆ ನೀಡಿದ ಕೆಲಸವನ್ನು ಪೂರ್ಣಗೊಳಿಸಬೇಕು. ನೀವು ಕೆಲಸವನ್ನೇ ಮಾಡದಿದ್ದರೇ ಮೊದಲು ಸಂಬಳವನ್ನು ಯಾರು ಕೊಡುತ್ತಾರೆ ಎಂದಿದ್ದಾರೆ.

# ಯುವ ಮತದಾರರ ಕ್ರಿಕೆಟ್ ಪಂದ್ಯಕ್ಕೆ ಉತ್ತಮ ಪ್ರತಿಕ್ರಿಯೆ

ಹುಕ್ಕೇರಿ: ಪ್ರಸ್ತುತ ಲೋಕಸಭೆ ಚುನಾವಣೆಯ ಮತದಾನದಲ್ಲಿ ಯುವ ಮತದಾರರನ್ನು ಪ್ರೇರೇಪಿಸುವ ನಿಟ್ಟಿನಲ್ಲಿ ಮತ ಪ್ರಮಾಣ ಹೆಚ್ಚಳಕ್ಕೆ ಆಯೋಜಿಸಿರುವ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಉಪವಿಭಾಗಾಧಿಕಾರಿಯೂ ಆದ ಸಹಾಯಕ ಚುನಾವಣಾ ಅಧಿಕಾರಿ ಬಸವಣೆಪ್ಪಾ ಕಲ್ಲಶೆಟ್ಟಿ ಹೇಳಿದರು.




ಪಟ್ಟಣದ ಹೊರವಲಯದ ತಾಲೂಕು ಕ್ರೀಡಾಂಗಣದಲ್ಲಿ ಶುಕ್ರವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ರ ಪ್ರಯುಕ್ತ ತಾಲೂಕಾ ಸ್ವೀಪ್ ಸಮಿತಿಯು ಮತದಾನ ಜಾಗೃತಿಗಾಗಿ ಯುವ ಮತದಾರರಿಗೆ ಏರ್ಪಡಿಸಿದ ಕ್ರಿಕೆಟ್ ಪಂದ್ಯಾವಳಿಯ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಮತದಾನ ಪ್ರಮಾಣ ಹೆಚ್ಚಳಕ್ಕೆ ಈಗಾಗಲೇ ವಿವಿಧ ರೀತಿಯ ಚಟುವಟಿಕೆಗಳನ್ನು ಹಮ್ಮಿಕೊಂಡಿದ್ದು ಇದೀಗ ಯುವ ಮತ್ತು ಹೊಸ ಮತದಾರರನ್ನು ಗುರಿಯಾಗಿಟ್ಟುಕೊಂಡು ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದರು.

ಸಹಾಯಕ ಚುನಾವಣೆ ಅಧಿಕಾರಿ ರೇಖಾ ಡೊಳ್ಳಿನವರ ಮಾತನಾಡಿ, ದೇಶದ ಅಮೂಲ್ಯ ಆಸ್ತಿಯಾಗಿರುವ ಯುವಕರು ತಪ್ಪದೇ ಕಡ್ಡಾಯವಾಗಿ ತಮ್ಮ ಪರಮಾಧಿಕಾರವಾದ ಮತ ಹಕ್ಕನ್ನು ಚಲಾಯಿಸಬೇಕು ಎಂದರು. ಎಲ್ಲಾ ಕ್ರೀಡಾಪಟುಗಳಿಗೆ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಕ್ರೀಡಾಪಟುಗಳಿಗೆ ಗುಲಾಬಿ ಹೂ ನೀಡಿ ಸ್ವಾಗತಿಸಲಾಯಿತು. ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಟಿ.ಆರ್. ಮಲ್ಲಾಡದ ಅವರು ವಿಜೇತ ಬೆಲ್ಲದ ಬಾಗೇವಾಡಿ (ಪ್ರಥಮ), ಯಮಕನಮರಡಿ (ದ್ವಿತಿಯ) ತಂಡಗಳಿಗೆ ಟ್ರೋಫಿ, ಬಹುಮಾನ ಹಾಗೂ ಭಾಗವಹಿಸಿದ ಎಲ್ಲ ಯುವ ಮತದಾರರಿಗೆ ಪ್ರಶಸ್ತಿ ಪತ್ರಗಳನ್ನು ವಿತರಿಸಿದರು.

ಜಿಲ್ಲಾ ಪಂಚಾಯತ ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಯೋಜನಾ ನಿರ್ದೇಶಕ ಡಾ.ಎಂ.ಕೃಷ್ಣರಾಜು, ತಹಶಿಲ್ದಾರ ಬಲರಾಮ ಕಟ್ಟಿಮನಿ, ಪುರಸಭೆ ಮುಖ್ಯಾಧಿಕಾರಿ ಶಂಭುಲಿಂಗ ಕಣ್ಣೆ, ತಾಪಂ ವ್ಯವಸ್ಥಾಪಕ ಅವಿನಾಶ ಹೊಳೆಪ್ಪಗೋಳ, ಯೋಜನಾಧಿಕಾರಿ ಪ್ರಶಾಂತ್ ಮುನ್ನೊಳಿ, ಸಹಾಯಕ ನಿರ್ದೇಶಕ ರಾಜು ಡಾಗೆ, ಶಂಕರ ಕಾಂಬಳೆ, ಪಿ.ಆರ್. ನೇರ್ಲಿ, ನಿರಂಜನ ಕುರಬೇಟ, ತೋಟಗಾರಿಕೆ ಸಹಾಯಕ ನಿರ್ದೇಶಕ ತಾತ್ಯಾಸಾಹೇಬ ನಾಂದನಿ, ವಿ.ಎಂ. ಕತ್ತಿ ಕಾಲೇಜಿನ ಪ್ರಾಂಶುಪಾಲ ಡಾ.ವಿ.ಎಸ್. ಹೂಗಾರ, ಆರ್.ಎ. ಮಿರ್ಜಿನಾಯಿಕ, ಬಿ.ಎಸ್. ಪಾಟೀಲ, ನಾಗಲಿಂಗ ಮಾಳಗಿ, ಶಂಕರ್ ಶಿರಗುಪ್ಪಿ, ಮಹಾಂತೇಶ ಬಾದವಾನಮಠ, ಶೇಖರ ಡಗೆ ಮತ್ತಿತರರು ಉಪಸ್ಥಿತರಿದ್ದರು.



## ಯರನಾಳ ಬ್ಯಾರೇಜ್‌ನಲ್ಲಿ ಅಳವಡಿಸಿದ ಪಂಪ್ ಸೆಟ್ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ

ಹುಕ್ಕೇರಿ: ಹುಕ್ಕೇರಿ ತಾಲೂಕಿನ ಯರನಾಳ ಬ್ಯಾರೇಜನಿಂದ ಬರಗಾಲದಿಂದ ಪೂರ್ತಿ ಬತ್ತಿ ಹೋಗಿರುವ ಹಿರಣ್ಯಕೇಶಿ ನದಿಗೆ ನೀರು ತುಂಬಿಸುವ ಸಲುವಾಗಿ ಯರನಾಳ ಬ್ಯಾರೇಜ್‌ನಲ್ಲಿ ಅಳವಡಿಸಿದ ಪಂಪ್ ಸೆಟ್ ಸ್ಥಳಕ್ಕೆ ಇಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಜಿಹೊಳಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬರಗಾಲದಿಂದ ತತ್ತರಿಸಿರುವ ಹಿರಣ್ಯಕೇಶಿ ನದಿಯ ಸುತ್ತಮುತ್ತಲಿನ ಗ್ರಾಮಗಳಾದ ಯರನಾಳ, ಮದಮಕ್ಕನಾಳ, ಯರಗಟ್ಟಿ, ಬಸ್ತವಾಡ, ಬಡಕುಂದ್ರಿ, ಗೌಡವಾಡ, ಕುರಣಿ, ಅರ್ಜುನವಾಡ, ಕೋಚರಿ, ಚಿಕ್ಕಾಲಗುಡ್ಡ, ಹೆಬ್ಬಾಳ ಹಾಗೂ ಮಸರಗುಪ್ಪಿ ಸೇರಿ ಇತರೆ ಭಾಗದ ರೈತರು, ಜನ – ಜಾನುವಾರುಗಳಿಗೆ ಇದರ ಸದುಪಯೋಗ ಆಗಲಿದ್ದು, ನೀರನ್ನು ಮಿತವಾಗಿ ಬಳಸಲು ಜನರಲ್ಲಿ ಸತೀಶ್ ಜಾರಜಿಹೊಳಿ ಅವರು ಇದೇ ವೇಳೆ ಮನವಿ ಮಾಡಿದರು.

ಈ ವೇಳೆ ವಿವಿಧ ಗ್ರಾಮದ ಮುಖಂಡರು ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಶಶಿಕಾಂತ ನಾಯಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

# ವಿವಿಧ ತಂಡಗಳನ್ನೊಳಗೂಡಿ ಚುನಾವಣಾ ಕಾರ್ಯ ಯಶಸ್ವಿಗೊಳಿಸಲು ಕರೆ: ಸಾಮಾನ್ಯ ವೀಕ್ಷಕ ಚಂದ್ರಶೇಖರ ಸಖಮುರಿ

ಬಳ್ಳಾರಿ: ಜಗತ್ತಿನ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿರುವ ನಮ್ಮ ಹೆಮ್ಮೆಯ ಭಾರತದಲ್ಲಿ ನಡೆಯುತ್ತಿರುವ ಪ್ರಸ್ತುತ ಲೋಕಸಭಾ ಚುನಾವಣೆಯು ನಮ್ಮ ದೇಶದ ಹೆಮ್ಮೆಯಾಗಿದ್ದು, ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆ ನಡೆಸಲು ಅಧಿಕಾರಿಗಳನ್ನು ಒಳಗೊಂಡಿರುವ ವಿವಿಧ ತಂಡಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಚುನಾವಣಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಬಳ್ಳಾರಿ ಲೋಕಸಭೆ ಚುನಾವಣೆಯ ಸಾಮಾನ್ಯ ವೀಕ್ಷಕ ಚಂದ್ರಶೇಖರ ಸಖಮುರಿ ಅವರು ಕರೆ ನೀಡಿದರು.

ಶುಕ್ರವಾರದಂದು, ಬಳ್ಳಾರಿ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಚುನಾವಣೆ ಸಿದ್ಧತೆ ಕುರಿತು ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.



ಮತದಾರರು ಮುಕ್ತವಾಗಿ ಮತದಾನ ಮಾಡಲು ಶಾಂತಿಯುತ, ಸುವ್ಯವಸ್ಥಿತವಾದ ವಾತಾವರಣ ರೂಪಿಸಬೇಕು.

ಈ ನಿಟ್ಟಿನಲ್ಲಿ ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ಸಮಿತಿಯ ನೋಡೆಲ್ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳು ಚುನಾವಣಾ ಆಯೋಗ ನಿರ್ದೇಶನದನ್ವಯ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಚುನಾವಣೆ ಕಾರ್ಯಕ್ಕೆ ಎಲ್ಲ ನಿಯೋಜಿತ ಅಧಿಕಾರಿಗಳು ತರಬೇತಿ ಹೊಂದಿದ್ದು, ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು. ಈ ಕುರಿತು ಚುನಾವಣೆಯ ಎಲ್ಲ ಕಾರ್ಯ ಸಿದ್ಧತೆಗಳನ್ನು ನಿಯಮಾನುಸಾರ ಪರಿಶೀಲಿಸಬೇಕು ಎಂದು ನಿರ್ದೇಶನ ನೀಡಿದರು.

ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಮತಗಟ್ಟೆ ಕೇಂದ್ರಗಳಲ್ಲಿ ಕನಿಷ್ಟ ಮೂಲ ಸೌಲಭ್ಯಗಳ ಸಿದ್ದತೆಗಳನ್ನು ಖಚಿತಪಡಿಸಿ ಕೊಳ್ಳಬೇಕು. ಮತದಾರರ ಸಂಖ್ಯೆಗೆ ಅನುಗುಣವಾಗಿ ಮತಗಟ್ಟೆಗಳಲ್ಲಿ ಮೂಲಸೌಲಭ್ಯಗಳನ್ನು ಒದಗಿಸಲು ಇನ್ನೂ ಸಾಕಷ್ಟು ಕಾಲಾವಕಾಶ ನಿಮ್ಮಲ್ಲಿ ಇದೆ. ಈ ಕುರಿತು ಸಹಾಯಕ ಚುನಾವಣಾಧಿಕಾರಿಗಳು ಆಸಕ್ತಿ ವಹಿಸಿ ಸೂಕ್ತ ಕ್ರಮ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಮೂಲಭೂತ ಸೌಕರ್ಯಗಳಿಗೆ ಆದ್ಯತೆ ನೀಡಿ:

ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಬೆಳಕು, ನೆರಳು, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಹಿರಿಯ ನಾಗರಿಕರು ಮತ್ತು ವಿಶೇಷಚೇತನರಿಗೆ ರ್ಯಾಂಪ್, ವೀಲ್ಚೇರ್ ಹಾಗೂ ಇತರೆ ವ್ಯವಸ್ಥೆಯನ್ನು ಮತದಾರರ ಸಂಖ್ಯೆಗೆ ಅನುಗುಣವಾಗಿ ಕೈಗೊಳ್ಳಬೇಕು ಎಂದು ನಿರ್ದೇಶಿಸಿದೆ.

ಈ ನಿಟ್ಟಿನಲ್ಲಿ ಆಯಾ ಕ್ಷೇತ್ರದ ಎಆರ್‌ಓಗಳು ಮೂಲಭೂತ ಸೌಕರ್ಯಗಳು ಸುಸ್ಥಿತಿಯಲ್ಲಿವೆಯೇ ಎಂಬುದನ್ನು ಪರಿಶೀಲಿಸಬೇಕು. ಇಲ್ಲದಿದ್ದಲ್ಲಿ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕು. ಉತ್ತಮ ಸೌಲಭ್ಯಗಳು ಮತದಾರರನ್ನು ಸೆಳೆಯಲು ಸಹಕಾರಿಯಾಗುತ್ತವೆ ಎಂದರು.

ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಎಫ್‌ಎಸ್ಟಿ, ಎಸ್‌ಎಸ್ಟಿ ಹಾಗೂ ವಿವಿಟಿ ತಂಡಗಳು ತಮ್ಮ ಕಾರ್ಯಗಳನ್ನು ಚುರುಕುಗೊಳಿಸಬೇಕು.

ಚುನಾವಣಾ ಅಕ್ರಮಗಳ ಮೇಲೆ ನಿಗಾವಹಿಸಬೇಕು. ಅದರಂತೆಯೇ ಇತರೆ ಸಮಿತಿಗಳೂ ಕಾರ್ಯಪ್ರವೃತ್ತರಾಗಬೇಕು ಎಂದು ಹೇಳಿದರು.



## ವೃದ್ಧೆಯ ಹೆಸರಲ್ಲಿ ಬೂತ್ ಏಜೆಂಟ್ ಮತದಾನ: ಅಧಿಕಾರಿಗಳು ವಜಾ

ಕಾಸರಗೋಡು: ಜಿಲ್ಲೆಯ ಲೋಕಸಭಾ ಕ್ಷೇತ್ರಗಳಲ್ಲಿ ಒಂದಾಗಿರುವ ಕಲ್ಯಾಶ್ಶೇರಿಯಲ್ಲಿ ಮನೆಯಿಂದ ಮತದಾನ ವೇಳೆ ನಕಲಿ ಮತದಾನ ನಡೆಸಿರುವ ಬಗ್ಗೆ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ನಾಲ್ವರು ಮತಗಟ್ಟೆ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ.

92 ರ ಹರೆಯದ ವೃದ್ಧೆಯೋರ್ವರು ಮಾಡಬೇಕಿದ್ದ ಮತದಾನದ ಬದಲಿಗೆ ಸಿಪಿಎಂನ ಬೂತ್ ಏಜೆಂಟ್ ಒಬ್ಬರು ಮತದಾನ ಮಾಡಿರುವ ಸಿಸಿ ಕ್ಯಾಮರಾ ದೃಶ್ಯಾವಳಿಗಳು ಬಹಿರಂಗಗೊಂಡಿದ್ದು, ಈ ಹಿನ್ನೆಲೆಯಲ್ಲಿ ಅಧಿಕಾರಿಗಳನ್ನು ಅಮಾನತುಗೊಳಿಸಿ ಕಣ್ಣೂರು ಜಿಲ್ಲಾ ಚುನಾವಾಣಾಧಿಕಾರಿ ಅರುಣ್ ಕೆ. ವಿಜಯನ್ ಆದೇಶ ನೀಡಿದ್ದಾರೆ.

ಜೊತೆಗೆ ಈ ಬಗ್ಗೆ ತನಿಖೆಗೆ ಕ್ರಮ ಕೈಗೊಳ್ಳಲಾಗಿದ್ದು, ಇಲಾಖಾ ಮಟ್ಟದ ಕ್ರಮಕ್ಕೆ ಕೂಡಾ ಶಿಫಾರಸು ಮಾಡಲಾಗಿದೆ.

# ರಾಜ್ಯದಲ್ಲಿ ಎರಡು, ಕೇಂದ್ರದಲ್ಲಿ ಒಂದು ಬಾರಿ ರೈತರ ಸಾಲ ಮನ್ನಾ ಮಾಡಿದ್ದು ಕಾಂಗ್ರೆಸ್ ಸರ್ಕಾರವೇ: ಸಚಿವ ಸತೀಶ್ ಜಾರಕಿಹೊಳಿ

ಹುಕ್ಕೇರಿ: ಕಾಂಗ್ರೆಸ್ ರೈತರ, ಬಡವರ, ಹಿಂದುಳಿದವರ, ದೀನ ದಲಿತರ ಪಕ್ಷ. ಅದಕ್ಕಾಗಿಯೇ ರಾಜ್ಯದಲ್ಲಿ ಎರಡು ಬಾರಿ, ಕೇಂದ್ರದಲ್ಲಿ ಒಂದು ಬಾರಿ ರೈತರ ಸಾಲವನ್ನು ಮನ್ನಾ ಮಾಡಿದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಹುಕ್ಕೇರಿ ತಾಲೂಕಿನ ಗುಡಸ, ಹುಲ್ಲೋಳ್ಳಿ, ಕೊಟಬಾಗಿ, ಸುಲ್ತಾನಪೂರ್, ಯರನಾಳ ಹಾಗೂ ಬಡಕುಂದ್ರಿ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಮತಯಾಚಿಸಿ, ಅವರು ಮಾತನಾಡಿದರು.

ಸಿಎಂ ಸಿದ್ದರಾಮಯ್ಯನವರ ಹಿಂದಿನ ಅವಧಿಯಲ್ಲಿ, ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರದಲ್ಲಿ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಿದ್ದೇವೆ. ಡಾ. ಮನಮೋಹನ್ ಸಿಂಗ್ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ 70 ಸಾವಿರ ಕೋಟಿ ರೂಪಾಯಿ ರೈತರ ಸಾಲವನ್ನು ಮನ್ನಾ ಮಾಡಿದ್ದೇವೆ. ಆದ್ದರಿಂದ ಸದಾ ನಿಮ್ಮ ಪ್ರಗತಿಯನ್ನು ಬಯಸುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ತಿಳಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ ಕಾರ್ಯಕರ್ತರು ಮನೆಯಲ್ಲೇ ಕುಳಿತರೆ ಸಾಲದು, ಕಾಂಗ್ರೆಸ್ ಸರ್ಕಾರದ ಎಲ್ಲಾ ಯೋಜನೆಗಳ ಬಗ್ಗೆ ಮತದಾರರಿಗೆ ತಿಳಿಸಬೇಕೆಂದು ಕರೆ ನೀಡಿದರು.

ಬಿಜೆಪಿಯವರು ಹೇಳ್ತಾರೆ, ಮೋದಿ ಮುಖ ನೋಡಿ ಮತ ನೀಡಿ ಎಂದು, ಆದರೆ ಮೋದಿ ಮುಖ ನೋಡಿ ಬಿಜೆಪಿ ಅಭ್ಯರ್ಥಿಗೆ ಮತ ನೀಡಿದರೆ ಪ್ರಧಾನಿ ಮೋದಿ ಬಂದು ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸಲ್ಲ. ಅದಕ್ಕಾಗಿ ಸ್ಥಳೀಯವಾಗಿ ನಿಮ್ಮ ಎಲ್ಲಾ ಕಷ್ಟ, ದುಖಃಗಳಲ್ಲಿ ಭಾಗಿಯಾಗುವ ನಮ್ಮನ್ನು ಬೆಂಬಲಿಸಬೇಕು. ಇನ್ನು ಪ್ರಿಯಂಕಾ ಜಾರಕಿಹೊಳಿ ಗೆದ್ದೆ ಗೆಲ್ಲುತ್ತಾಳೆಂಬ ವಿಶ್ವಾಸ ನಮಗಿದೆ. ಆದರೆ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಬೇಕೆಂದು ಮನವಿ ಮಾಡಿದರು.



ಈಗಾಗಲೇ ನಿಮ್ಮ ಭಾಗಕ್ಕೆ ನೀರು ಒದಗಿಸಿದ್ದೇವೆ. ಮುಂದೆಯೂ ಇನ್ನಷ್ಟು ಹೆಚ್ಚಿನ ಸಂಖ್ಯೆಯಲ್ಲಿ ನೀರಾವರಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇವೆ. ಆದರೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತಗಳನ್ನು ನೀಡುವ ಮೂಲಕ ನಮ್ಮ ಕೈಯನ್ನು ಬಲಪಡಿಸಬೇಕೆಂದು ತಿಳಿಸಿದರು.

ಜನಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದೇ ನಮ್ಮ ಮೊದಲ ಆದ್ಯತೆ. ಹುಕ್ಕೇರಿ ಕ್ಷೇತ್ರಕ್ಕೆ ನಮ್ಮ ಇಲಾಖೆಯಿಂದ ಈ ಬಾರಿ 5 ಶಾಲೆಗಳನ್ನು ನೀಡಿದ್ದೇನೆ. ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಿದ್ದೇವೆ. ಇನ್ನು ನೀರಾವರಿ ಸೌಲಭ್ಯ ಕಲ್ಪಿಸಲು ಕಳೆದ ಎರಡು ತಿಳಂಗಳಿಂದ ಶ್ರಮಿಸುತ್ತಿದ್ದೇನೆ. ಚುನಾವಣೆಗೆ ನಿಲ್ಲಬೇಕೆಂಬುವುದು ಕನಸು, ಮನಸ್ಸಿನಲ್ಲಿಯೂ ಇರಲಿಲ್ಲ. ಆದರೆ ಹೈಕಮಾಂಡ್, ರಾಜ್ಯ ನಾಯಕರು, ಜಿಲ್ಲೆಯ ಎಲ್ಲಾ ನಾಯಕರ ಮನವಿ, ಒತ್ತಾಯದ ಮೇರೆಗೆ ಪ್ರಿಯಂಕಾ ಅವರನ್ನು ಚುನಾವಣಾ ಕಣಕ್ಕೆ ಇಳಿಸಿದ್ದು, ಪ್ರಿಯಂಕಾ ಅವರನ್ನು ಗೆಲ್ಲಿಸಲು ನಿವೆಲ್ಲ ಶ್ರಮಿಸಬೇಕೆಂದು ಹೇಳಿದರು.

ಇನ್ನು ಸುಲ್ತಾನಪೂರ್ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಸುಲ್ತಾನಪೂರ್ ಗ್ರಾಮದ ಜನತೆ ನಮ್ಮೂರಿನಲ್ಲಿ ಕೆಲವು ಅಭಿವೃದ್ಧಿ ಕೆಲಸಗಳಾಗಬೇಕೆಂದು ಮನವಿ ಮಾಡಿದರು. ಸ್ಥಳದಲ್ಲೇ ಮನವಿಗೆ ಸ್ಪಂದಿಸಿದ ಸಚಿವ ಸತೀಶ್ ಜಾರಕಿಹೊಳಿ, ಚುನಾವಣೆ ಮುಗಿದ ಬಳಿಕ ನಿಮ್ಮ ಎಲ್ಲಾ ಬೇಡಿಕೆಗಳನ್ನು ಈಡೇರಿಸುತ್ತೇನೆಂದು ಭರವಸೆ ನೀಡಿದರು.

ಮಾಜಿ ಸಚಿವ ಶಶಿಕಾಂತ್ ನಾಯಕ ಮಾತನಾಡಿ, ಸಚಿವ ಸತೀಶ್ ಜಾರಕಿಹೊಳಿ ಅವರ ಕಾರ್ಯಕ್ಷಮತೆ ಬಗ್ಗೆ ನಿಮ್ಮೆಲ್ಲರಿಗೂ ಗೊತ್ತಿದೆ. ಯಾರೇ ಜನ ಸಾಮಾನ್ಯರು ಅವರ ಬಳಿ ಹೋದರೆ ಸಮಾಧಾನದಿಂದ ಸಮಸ್ಯೆಯನ್ನು ಆಲಿಸಿ, ಪರಿಹಾರ ಕಲ್ಪಿಸುತ್ತಾರೆ. ನಾನು ಸಾಕಷ್ಟು ಕೆಲಸಕ್ಕಾಗಿ ಅವರ ಬಳಿ ಹೋದಾಗ ಸ್ಪಂದಿಸಿದ್ದಾರೆ. ಕಾರಣ ಇಂತಹ ನಾಯಕರು ಸಿಕ್ಕಿದ್ದು, ನಮ್ಮ ಸೌಭಾಗ್ಯ. ಅಂತಹ ನಾಯಕರ ಮಗಳ ಪುತ್ರಿ ಪ್ರಿಯಂಕಾ ಜಾರಕಿಹೊಳಿ ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ ಚಿಕ್ಕೋಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ಬಾವುಟ ಹಾರಿಸೋಣ ಎಂದರು.

ಹುಕ್ಕೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ ಮಾತನಾಡಿ, ಚಿಕ್ಕೋಡಿ ಲೋಕಸಭೆ ಕ್ಷೇತ್ರ, ಸರ್ವರ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ, ಪದವೀಧರೆ, ಶೀಕ್ಷಣಕ್ಕೆ ಆದ್ಯತೆ ನೀಡುವ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬೆಂಬಲಿಸಿ ಎಂದು ಕೋರಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಕಲಗೌಡ ಪಾಟೀಲ್, ಸುರೇಶ್ ಹುಂಚಾಳೆ, ದಯಾನಂದ ನಾಯಕ, ರವಿ ಬಡಿಗೇರ, ಅನಿಲ ನೇರ್ಲಿ, ತಮ್ಮಣ್ಣಾ ಬಡಿಗೇರ, ಮಹಿಳಾ ಮುಖಂಡರಾದ ಪಂಕಜಾ ನೇರ್ಲಿ ಸೇರಿದಂತೆ ಗುಡಸ, ಹುಲ್ಲೋಳ್ಳಿ, ಕೊಟಬಾಗಿ, ಸುಲ್ತಾನಪೂರ್ ಹಾಗೂ ಬಡಕುಂದ್ರಿ ಗ್ರಾಮದ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಹಿರಿಯರು, ಮಹಿಳೆಯರು, ಯುವಕರು ಇದ್ದರು.

# ಉಸಿರಿರುವರೆಗೂ ರೈತರ ಪರವಾಗಿರುತ್ತೇನೆ: ಸಚಿವ ಶಿವಾನಂದ ಪಾಟೀಲ



ಮುಧೋಳ: ಕಳೆದ 30 ವರ್ಷಗಳಿಂದ ನಾನು ರಾಜಕೀಯ ರಂಗದಲ್ಲಿದ್ದೇನೆ. ನನ್ನ ರಾಜಕೀಯ ಜೀವನದಲ್ಲಿ ನಾನು ಯಾವಾಗಲೂ ರೈತರ ಪರವಾಗಿದ್ದೇನೆ. ಉಸಿ-ರಿರುವರೆಗೂ ನಾನು ರೈತರ ಪರವಾಗಿಯೇ ಕಾರ್ಯ ನಿರ್ವಹಿಸುತ್ತೇನೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಅವರು ನಗರದ ಜಮಖಂಡಿ ರಸ್ತೆಯಲ್ಲಿರುವ ಶ್ರೀ ಟ್ರಾನ್ಸ್‌ಪೋರ್ಟ್ ಕಂಪನಿಯಲ್ಲಿ ರೈತರೊಂದಿಗೆ ಸೌಜನ್ಯದ ಸಮಾಲೋಚನೆಯಲ್ಲಿ ಮಾತನಾಡಿ, ಇತ್ತೀಚೆಗೆ ಪತ್ರಿಕೆಗಳಲ್ಲಿ ರೈತರ ಸಂಕಷ್ಟಗಳಿಗೆ ಸ್ಪಂದಿಸದೇ ಇರುವ ಕಾರಣ ಸಕ್ಕರೆ ಸಚಿವರಿಗೆ ಘೇರಾವ್ ಹಾಕಲಾಗುವುದು ಎಂಬ ರೈತರ ಹೇಳಿಕೆಯ ಬಗ್ಗೆ ಗಂಭೀರವಾಗಿ ಪರಿಗಣಿಸಿ, ನನ್ನ ಬಗ್ಗೆ ಏನಾದರೂ ತಪ್ಪು ತಿಳುವಳಿಕೆ ಇದ್ದರೆ ಅದನ್ನು ಸರಿಪಡಿಸಬೇಕೆಂದು ಖುದ್ದಾಗಿ ರೈತರನ್ನು ಭೇಟಿಯಾಗಲು ಬಂದಿದ್ದೇನೆ. ರೈತರ ಸಮಸ್ಯೆಗಳ ಬಗ್ಗೆ ಈಗ ಚುನಾವಣಾ ಸಂದರ್ಭವಾಗಿರುವುದ-ರಿಂದ ನಾನು ಯಾವುದೇ ರೀತಿಯ ಆಶ್ವಾಸನೆ, ಭರವಸೆ ನೀಡಲು ಬರುವುದಿಲ್ಲ. ಚುನಾವಣೆಯ ನಂತರ ರೈತರ ಸಮಸ್ಯೆಗಳ ಬಗ್ಗೆ ರೈತ ಮುಖಂಡರೊಂದಿಗೆ ಸುದೀರ್ಘವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳೋಣ ಎಂದು ಹೇಳಿದರು. ಆದ್ದ-ರಿಂದ ರೈತಬಾಂಧವರು ನನ್ನ ಬಗ್ಗೆ ಯಾವುದೇ ರೀತಿಯಿಂದ ತಪ್ಪು ಭಾವನೆ ಇಟ್ಟುಕೊಳ್ಳಬಾರದೆಂದು ಎಂದು ಅವರು ಸ್ಪಷ್ಟಪಡಿಸಿದರು.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ನಾನು ತಮ್ಮೆಲ್ಲರ ಆಶೀರ್ವಾದದಿಂದ ಶಾಸಕನಾಗಿ ಆಯ್ಕೆಯಾಗಿ, ಸಚಿವನಾಗಿದ್ದೇನೆ. ನಾನು ಯಾವಾಗಲೂ ರೈತರ ಸಂಕಷ್ಟಗಳಿಗೆ ಸದಾ ಸ್ಪಂದಿಸಿದ್ದೇನೆ. ರೈತ-ರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸದಾ ಕಾರ್ಯ ನಿರ್ವಹಿಸುತ್ತೇನೆ. ನನಗೆ ಆಶೀರ್ವದಿಸಿದಂತೆ ಕಾಂಗ್ರೆಸ್ ಪಕ್ಷದಿಂದ ಬಾಗಲಕೋಟೆ ಲೋಕಸಭಾ ಮತಕ್ಷೇತ್ರಕ್ಕೆ ಸ್ಪರ್ಧಿಸಿರುವ ಸಂಯುಕ್ತಾ ಪಾಟೀಲ ಅವರಿಗೂ ತಾವು ಆಶೀರ್ವದಿಸಬೇಕೆಂದು ವಿನಂತಿಸಿದರು.

ಬಾಗಲಕೋಟ ಜಿಲ್ಲಾ ರೈತ ಸಂಘದ ಅಧ್ಯಕ್ಷ ಬಸವಂತ ಕಾಂಬಳೆ ಮಾತನಾಡಿ, ಕಬ್ಬು ಬೆಳೆಗಾರರಿಗೆ ಪ್ರಮುಖವಾಗಿ ಐದು ಬೇಡಿಕೆಗಳಿದ್ದು, ಅದರಲ್ಲಿ ಮೊದಲನೆಯದಾಗಿ ಎಸ್‌ಎಪಿ ಕಾನೂನಿನ ಪ್ರಕಾರ ಸೂಕ್ತ ಸೌಲಭ್ಯಗಳು ದೊರಕಬೇಕು, ಸರ್ಕಾರದ ವತಿಯಿಂದ ಹೈಟೆಕ್ ತೂಕದ ಯಂತ್ರ ಸ್ಥಾಪಿಸಬೇಕು ಎಂದು ಇನ್ನುಳಿದ ಬೇಡಿಕೆಗಳ ಬಗ್ಗೆ ಸಚಿವರಿಗೆ ವಿವರಿಸಿದರು.

ಇಲ್ಲಿಯವರೆಗೆ ಅನೇಕ ಸರ್ಕಾರಗಳು ಬಂದವು, ಹೋದವು. ಅನೇಕ ಮುಖ್ಯಮಂತ್ರಿಗಳು ರೈತರ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಹೇಳಿ ಹೋದರು. ಇಲ್ಲಿಯವರೆಗೂ ರೈತರ ಸಂಕಷ್ಟಗಳು ಈಡೇರದೇ ನಾವು ಪ್ರತಿಬಾರಿ ಅನಿವಾರ್ಯವಾಗಿ ಹೋರಾಟದ ಮೂಲಕ ನ್ಯಾಯ ಪಡೆಯಬೇಕಾಗುತ್ತಿದೆ.

ಆದ್ದರಿಂದ ರೈತರ ಸಂಕಷ್ಟಗಳಿಗೆ ಸ್ಪಂದಿಸಿ, ಅವರ ತೊಂದರೆಗಳನ್ನು ಶಾಶ್ವತವಾಗಿ ನಿವಾರಣೆ ಮಾಡುವ ಕಾರ್ಯ ವಾಗಬೇಕೆಂದು ವಿನಂತಿಸಿದರು.

ರೈತರ ಸಮಸ್ಯೆಗಳ ಬಗ್ಗೆ ಕೆಲ ರೈತರು ವಿವರಿಸಲು ಪ್ರಾರಂಭಿಸಿದಾಗ ಕೆಲಕಾಲ ಗೊಂದಲದ ವಾತಾವರಣ ಉಂಟಾಯಿತು. ಈಗ ಚುನಾವಣಾ ಸಂದರ್ಭ ವಾಗಿರುವುದ-ರಿಂದ ಚುನಾವಣೆಯ ನಂತರ ಎಲ್ಲರೂ ಸೇರಿ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಬರುತ್ತದೆ ಎಂದು ರೈತ ಮುಖಂಡರುಗಳು ಪರಿಸ್ಥಿತಿಯನ್ನು ತಿಳಿಗೊಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಶೋಕ ಕಿವಡಿ, ಡಿಸಿಸಿ ಬ್ಯಾಂಕಿನ ಮಾಜಿ ಉಪಾಧ್ಯಕ್ಷ ಶಿವಾನಂದ ಉದಪುಡಿ, ಉದಯ ಸಾರವಾಡ, ರಾಜುಗೌಡ ಪಾಟೀಲ, ಸದುಗೌಡ ಪಾಟೀಲ, ಪರಮಾನಂದ ಕುಟರಟ್ಟಿ, ರೈತ ಮುಖಂಡರಾದ ದುಂಡಪ್ಪ ಯರಗಟ್ಟಿ, ಹನಮಂತ ನಬಾಬ, ಹನಮಂತಗೌಡ ಪಾಟೀಲ, ರುದ್ರಪ್ಪ ಅಡವಿ, ಸುರೇಶ ಚಿಂಚಲಿ ಸೇ-ರಿದಂತೆ ಇನ್ನಿತರರು ಭಾಗವಹಿಸಿದ್ದರು.

# ಕಿತ್ತೂರಿನ ನಾಡಿನಲ್ಲಿ ನಿಂಬಾಳಕ್ಕರ್ ಬಿರುಸಿನ ಪ್ರಚಾರ




ಚನ್ನಮ್ಮನ ಕಿತ್ತೂರು: ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳಕ್ಕರ್ ಅವರು ಕಿತ್ತೂರು ಮತಕ್ಷೇತ್ರದ ದೇವಗಾಂವ, ನಿಚ್ಚಣಕಿ, ಖೋದಾನಪೂರ, ಕಲಭಾಂವಿ, ಹುಣಸಿಕಟ್ಟಿ, ಕಾದ್ರೊಳ್ಳಿ ಮತ್ತು ತಿಗಡೊಳ್ಳಿಯಲ್ಲಿ ಬಿರುಸಿನ ಪ್ರಚಾರ ನಡೆಸಿದರು.

ಇವರಿಗೆ ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ ಸಾಥ್ ನೀಡಿ ಅವರ ಪರ ಅವರ ಜೊತೆಯಾಗಿ ಮತಯಾಚನೆ ಮಾಡಿದರು. ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಮಾತನಾಡಿದ ಶಾಸಕ ಬಾಬಾಸಾಹೇಬ್ ಪಾಟೀಲ, ಕ್ಷೇತ್ರ ಅಭಿವೃದ್ಧಿಯ ದೃಷ್ಟಿಯಲ್ಲಿ ಸಂಸದರ ಪಾತ್ರ ಸಹ ಬಹುಮುಖ್ಯವಾಗಿ ಇದೆ. ಆ ಕಾರಣ ನಮ್ಮ ಪಕ್ಕದ ಕ್ಷೇತ್ರದವರಾದ ಅಂಜಲಿ ನಿಂಬಾಳಕ್ಕರ್ ಅವರಿಗೆ ನಿಮ್ಮ ಅಮೂಲ್ಯವಾದ ಮತ ನೀಡಿ ಅವರನ್ನು ಗೆಲ್ಲಿಸಬೇಕು ಜೊತೆಗೆ ಕ್ಷೇತ್ರ ಅಭಿವೃದ್ಧಿ ಹೊಂದಲು ಅವಕಾಶ ನೀಡಬೇಕೆಂದು ಮತದಾರರಲ್ಲಿ ಮನವಿ ಮಾಡಿಕೊಂಡರು.

ಕಿತ್ತೂರು ಮತಕ್ಷೇತ್ರದ ಮತದಾರರು ನನ್ನ ಮೇಲೆ ವಿಶ್ವಾಸ ಇಟ್ಟು ನಮ್ಮ ಪಕ್ಷದ ಅಭ್ಯರ್ಥಿ ಅಂಜಲಿ ನಿಂಬಾಳಕ್ಕರ್ ಅವರ ಗುರುತು ಹಸ್ತಕ್ಕೆ ನಿಮ್ಮ ಮತ ಹಾಕಿ ನಮ್ಮ ಕ್ಷೇತ್ರವನ್ನು ಅಭಿವೃದ್ಧಿ ಹೊಂದಲು ಒಂದು ಅವಕಾಶ ಮಾಡಿಕೊಡಬೇಕು ಎಂದು ಬಾಬಾಸಾಹೇಬ್ ಪಾಟೀಲ ಹೇಳಿದರು.

ಬಿಜೆಪಿ ಪಕ್ಷ ಕಳೆದ 10 ವರ್ಷಗಳಲ್ಲಿ ಏನು ಕೆಲಸ ಮಾಡಿದ್ದಾರೆ ಎಂಬುದು ತಮಗೆಲ್ಲರಿಗೂ ಗೊತ್ತಿದೆ. ದೇಶವನ್ನು ಸಾಕಷ್ಟು ಸಾಲದಲ್ಲಿ ತಳ್ಳಿದ್ದಾರೆ. 15 ಲಕ್ಷ ಖಾತೆಗೆ ಹಾಕುತ್ತೆವೆ ಎಂದವರು ಎಲ್ಲಿ ಹಾಕಿದ್ದಾರೆ. ದೇಶದ ಆಗರ್ಭ ಶ್ರೀಮಂತರ ಪರ ಈ ಸರ್ಕಾರದಿಂದ ಜನತೆಗೆ ಯಾವುದೇ ಪ್ರಯೋಜನವಿಲ್ಲ ದೇಶದ ಒಳಿತಿಗಾಗಿ ಬಡವರ ರಕ್ಷಣೆಗಾಗಿ ಇರುವುದು ಒಂದೇ ಮಾರ್ಗ ಅದು ಹಸ್ತ ಕಾಂಗ್ರೆಸ್ ಪಕ್ಷಕ್ಕೆ ನಿಮ್ಮ ಮತ ಎಂದು ಹೇಳಿದರು.

ಹೀಗಾಗಿ ಈ ಬಾರಿ ಅವರು ಪಾಠ ಕಲಿಯುವುದು ಗ್ಯಾರಂಟಿಯಾಗಿದೆ. ಕಾಂಗ್ರೆಸ್ ಪಕ್ಷದ ಬಗ್ಗೆ ಮತದಾರರಲ್ಲಿ ವಿಶ್ವಾಸವಿದೆ. ಎಲ್ಲ ಗ್ಯಾರಂಟಿ ಯೋಜನೆಗಳ ಲಾಭವನ್ನು ರಾಜ್ಯದ ಜನ ಪಡೆದಿದ್ದಾರೆ. ಹೀಗಾಗಿ ನೀವು ನಮ್ಮ ಕೈ ಬಿಡುವುದಿಲ್ಲ ಎಂಬ ನಂಬಿಕೆಯಿದೆ ಎಂದು ಶಾಸಕ ಬಾಬಾಸಾಹೇಬ್ ಪಾಟೀಲ ನಾಗರಿಕರನ್ನು ಉದ್ದೇಶಿಸಿ ಮಾತನಾಡಿದರು.

ವಿವಿಧ ಗ್ರಾಮಗಳಿಗೆ ಆಗಮಿಸಿದ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳಕ್ಕರ್ ಅವರಿಗೆ ಅದ್ದೂರಿ ಸ್ವಾಗತ ಕೋರಲಾಯಿತು. ಇದೇ ಸಂದರ್ಭದಲ್ಲಿ ಅಭ್ಯರ್ಥಿಯಾದ ಅಂಜಲಿ ನಿಂಬಾಳಕ್ಕರ್, ಕಿತ್ತೂರು ಬ್ಲಾಕ್ ಅದ್ಯಕ್ಷ, ಮತ್ತು ನೂರಾರು ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಗ್ರಾಮಸ್ಥರು ಉಪಸ್ಥಿತ-ರಿದ್ದರು.

## ಪೋಟೋಗ್ರಾಫಿ– ವಿಡಿಯೋಗ್ರಾಫಿಯ ಉಚಿತ ತರಬೇತಿ

ಬೆಳಗಾವಿ: ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯು ಮೇ ಮತ್ತು ಜೂನ ತಿಂಗಳಿನಲ್ಲಿ ಪ್ರಾರಂಬವಾಗುವ ಜೆಸಿಬಿ ಅಪರೇಟರ್, ಪೋಟೋಗ್ರಾಫಿ, ವಿಡಿಯೋಗ್ರಾಫಿ, ಹಾಗೂ ಲಘು ಮೋಟರ್ ವಾಹನ ಚಾಲನಾ ತರಬೇತಿಗೆ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗೆ ಉಚಿತ ತರಬೇತಿ ನೀಡಲಾಗುತ್ತದೆ.

ತರಬೇತಿ ಪಡೆಯುವವರು 18 ರಿಂದ 45 ವಯಸ್ಸಿನವರಾಗಿರಬೇಕು. ಇದು ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದೆ. ಗ್ರಾಮೀಣ ವಿಭಾಗದ ನೀರುದ್ಯೋಗಿಗಳುಗೆ ಮೊದಲ ಆದ್ಯತೆ ನೀಡಲಾಗುವುದು.

ಆಸಕ್ತರು ಏ.30 ಒಳಗಾಗಿ ತಮ್ಮ ಹೆಸರು, ವಿಳಾಸಗಳನ್ನು ನೊಂದಾಯಿಸಿಕೊಳ್ಳಬಹುದು ಎಂದು ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರಾದ ಪ್ರಶಾಂತ ಬಡ್ಡಿ ಅವರು ಪ್ರಕರಣದಲ್ಲಿ ತಿಳಿಸಿದ್ದಾರೆ.

ಯಂತಿಯ ಪೂರ್ವ ಸಿದ್ಧತೆ ಸಭೆಯಲ್ಲಿ ತಿರ್ಮಾನಿಸಲಾಯಿತು.

## ಮೇ.20 ರಿಂದ 25 ರವರೆಗೆ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಬೆಳಗಾವಿ: ಧಾರವಾಡದ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಬೆಳಗಾವಿ ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಗೂ ಬೆಳಗಾವಿ ಜಿಲ್ಲೆಯ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್ ಇವುಗಳ ಸಯುಕ್ತ ಆಶ್ರಯದಲ್ಲಿ ರಫ್ತು ಅರಿವು ಮೂಡಿಸಲು "ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ ಮೇ.20 ರಿಂದ 25 ರವರೆಗೆ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್ (IMER) ಕಚೇರಿಯಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ.

6 ದಿನಗಳ ಈ ತರಬೇತಿ ಕಾರ್ಯಕ್ರಮವು ಅಂತರಾಷ್ಟ್ರೀಯ ವ್ಯವಹಾರದ ಮಾಹಿತಿಯನ್ನು ನೀಡುವ ಉದ್ದೇಶವನ್ನು ಹೊಂದಿರುತ್ತದೆ. ಈ ತರಬೇತಿಯಲ್ಲಿ ರಫ್ತು ವ್ಯವಹಾರಕ್ಕೆ ಸಂಬಂಧಿಸಿದಂತೆ ಸಂಪೂರ್ಣ ಹಾಗೂ ಸಮಗ್ರ ಮಾಹಿತಿಯನ್ನು ನೀಡಲಾಗುವುದು.

ರಫ್ತು ಅಂದರೇನು? ಏಕೆ? ಎಲ್ಲಿಗೆ? ಹಾಗೂ ಹೇಗೆ ಮಾಡಬೇಕೆಂಬುದರ ಬಗ್ಗೆ, ರಫ್ತಿಗೆ ಸಂಬಂಧಿಸಿದಂತೆ ನಿಯಮಾವಳಿಗಳು, ಅಂತರಾಷ್ಟ್ರೀಯ ರಫ್ತು ವ್ಯಾಪಾರ, ರಫ್ತು ಮಾರುಕಟ್ಟೆ, ರಫ್ತಿಗೆ ಸಂಬಂಧಿತ ಕೇಂದ್ರ ಸರ್ಕಾರದ ಸಂಸ್ಥೆಗಳಾದ ಡಿ.ಜಿ.ಎಫ್.ಟಿ., ಕಸ್ಟಮ್ಸ್, ಆರ್.ಬಿ.ಐ. ಹಾಗೂ ರಫ್ತು ಉತ್ತೇಜನ ಕೌನ್ಸಿಲ್‌ಗಳಾದ ಅಪೇಡಾ, ಫಿಯೋ ಇತ್ಯಾದಿ, ರಫ್ತು ಪ್ಯಾಕೇ-ಜಿಂಗ್, ಹಣಕಾಸು, ವಿದೇಶಿ ವಿನಿಮಯ, ಇ.ಸಿ.ಜಿ.ಸಿ. ಇ-ವಾಣಿಜ್ಯ ವೇದಿಕೆ ಹಾಗೂ ಜಿ.ಎಸ್.ಟಿ. ನಿಯಮಗಳ ಕುರಿತಾಗಿಯೂ ವಿಷಯ ಮಂಡನೆ ಮಾಡಲಾಗುವುದು.

ಉತ್ತರ ಕರ್ನಾಟಕದ ರಫ್ತು ಸಾಧ್ಯತಾ ಉತ್ಪನ್ನಗಳ ಕುರಿತು ಮಾಹಿತಿಯನ್ನು ಹಾಗೂ ಆಯಾ ಕ್ಷೇತ್ರಗಳಲ್ಲಿ ಸಾಕಷ್ಟು ಅನುಭವ ಹೊಂದಿರುವ ಅಥವಾ ಸೇವೆ ಸಲ್ಲಿಸುತ್ತಿರುವ ಪರಿಣಿತಿದಾರರು ಅತಿಥಿ ಉಪನ್ಯಾಸಕರಾಗಿ ಪಾಲ್ಗೊಂಡು ಮಾಹಿತಿ ನೀಡುವರು.

ಆಸಕ್ತಿಯುಳ್ಳವರೆಲ್ಲರೂ ಏ.30 ಒಳಗಾಗಿ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಜಾಲತಾಣ: www.vtpc.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಶುಲ್ಕ ರೂ. 3,540/- (ಜಿ.ಎಸ್.ಟಿ. ಸೇರಿ) ಇದ್ದು, ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಧಾರವಾಡ ಜಿಲ್ಲೆಯ ರಾಯಾಪುರದ ವಿಶ್ವೇಶ್ವರಯ್ಯಾ ವ್ಯಾಪಾರ ಉತ್ತೇಜನ ಕೇಂದ್ರ ಜಂಟಿ ನಿರ್ದೇಶಕರಿಗೆ, ಜಿಲ್ಲೆಗಳ ಅಭ್ಯರ್ಥಿಗಳು ಆಯಾ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿಗಳನ್ನು ಸಂಪರ್ಕಿಸಬಹುದು. ಮೊಬೈಲ್ ಸಂಖ್ಯೆ: 8073707446 (ಟಿ. ಎಸ್. ಮಲ್ಲಿಕಾರ್ಜುನ) 9742709229 (ವಿಶ್ವನಾಥ ಸೂಸಿಮಠ) ಗೆ ಸಂಪರ್ಕಿಸಬಹುದು ಎಂದು ಧಾರವಾಡದ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿ: ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯು ಮೇ ಮತ್ತು ಜೂನ ತಿಂಗಳಿನಲ್ಲಿ ಪ್ರಾರಂಬವಾಗುವ ಜೆಸಿಬಿ ಅಪರೇಟರ್, ಪೋಟೋಗ್ರಾಫಿ, ವಿಡಿಯೋಗ್ರಾಫಿ, ಹಾಗೂ ಲಘು ಮೋಟರ್ ವಾಹನ ಚಾಲನಾ ತರಬೇತಿಗೆ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯ-ರಿಗೆ ಉಚಿತ ತರಬೇತಿ ನೀಡಲಾಗುತ್ತದೆ.

ತರಬೇತಿ ಪಡೆಯುವವರು 18 ರಿಂದ 45 ವಯಸ್ಸಿನವರಾಗಿರಬೇಕು. ಇದು ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದೆ. ಗ್ರಾಮೀಣ ವಿಭಾಗದ ನೀರುದ್ಯೋಗಿಗಳುಗೆ ಮೊದಲ ಆದ್ಯತೆ ನೀಡಲಾಗುವುದು.

ಆಸಕ್ತರು ಏ.30 ಒಳಗಾಗಿ ತಮ್ಮ ಹೆಸರು, ವಿಳಾಸಗಳನ್ನು ನೊಂದಾಯಿಸಿಕೊಳ್ಳಬಹುದು ಎಂದು ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರಾದ ಪ್ರಶಾಂತ ಬಡ್ಡಿ ಅವರು ಪ್ರಕರಣದಲ್ಲಿ ತಿಳಿಸಿದ್ದಾರೆ.

## ಇಂದು ಭಗವಾನ್ ಮಹಾವೀರ ಜಯಂತಿ ಆಚರಣೆ

ಬೆಳಗಾವಿ: ಲೋಕಸಭೆ ಚುನಾವಣೆ-2024ರ ಪ್ರಯುಕ್ತ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಏ.21 ರಂದು ಭಗವಾನ್ ಮಹಾವೀರ ಜಯಂತಿ ಸರಳವಾಗಿ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿಗ ಕಚೇರಿಯಲ್ಲಿ ನಡೆದ ಭಗವಾನ್ ಮಹಾವೀರ ಜಯಂತಿಯ ಪೂರ್ವ ಸಿದ್ಧತೆ ಸಭೆಯಲ್ಲಿ ತಿರ್ಮಾನಿಸಲಾಯಿತು.

## ಪತ್ನಿಯನ್ನು ಕಲ್ಲಿನಿಂದ ಜಜ್ಜಿ ಕೊಲೆ; ಬಳಿಕ ಪತಿ ಆತ್ಮಹತ್ಯೆ



ರಾಯಚೂರು: ಪತ್ನಿಯನ್ನ ಕಲ್ಲಿನಿಂದ ಜಜ್ಜಿ ಕೊಂದು ಪತಿ ಆತ್ಮಹತ್ಯೆ ಮಾಡಿಕೊಂಡ ಘಟನೆ ರಾಯಚೂರು ಜಿಲ್ಲೆ ಮಸ್ಕಿ ತಾಲೂಕಿನ ದಿದ್ದಿಗಿ ಗ್ರಾಮದಲ್ಲಿ ನಡೆದಿದೆ. ಕವಿತಾ(26) ಕೊಲೆಯಾದ ದುರ್ದೈವಿ. ಭೀಮಣ್ಣ (29) ನೇಣಿಗೆ ಶರಣಾದ ಪತಿ ಕಳೆದ ಡಿಸೆಂಬರ್ ತಿಂಗಳಲ್ಲಿ ಮದುವೆ ಆಗಿತ್ತು. ಮದುವೆ ಆದ ಬಳಿಕ ಪತ್ನಿಯ ಶೀಲ ಶಂಕಿಸುತ್ತಿದ್ದ ಪತಿ. ಇದೇ ವಿಚಾರಕ್ಕೆ ರಾತ್ರಿ ಗಂಡ-ಹೆಂಡತಿ ನಡುವೆ ಜಗಳವಾಗಿದೆ. ಬೆಳಗ್ಗೆ ಜಮೀನಿಗೆ ಹೋದಾಗ ಮತ್ತೆ ಪತಿ-ಪತ್ನಿ ನಡುವೆ ಜಗಳ ಶುರುವಾಗಿದೆ. ಜಗಳದ ವೇಳೆ ಕಲ್ಲಿನಿಂದ ಜಜ್ಜಿ ಪತ್ನಿಯನ್ನು ಕೊಂದು ಪತಿ ಮರಕ್ಕೆ ನೇಣಿ ಹಾಕಿಕೊಂಡಿದ್ದಾನೆ. ಮಾಹಿತಿ ತಿಳಿದು ಪೊಲೀಸರು ಸ್ಥಳಕ್ಕೆ ಬಂದಿದ್ದಾರೆ. ಬಳಗಾನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗೂಡ್ಸ್ ವಾಹನ- ಬೈಕ್ ಮುಖಾಮುಖಿ ಡಿಕ್ಕಿ: ಸ್ಥಳದಲ್ಲೇ ಇಬ್ಬರ ಸಾವು, ನಾಲ್ವರಿಗೆ ಗಾಯ



ಬೆಳಗಾವಿ: ಗೂಡ್ಸ್ ವಾಹನ ಬೈಕ್ ಮುಖಾಮುಖಿ ಡಿಕ್ಕಿಯಾಗಿದ್ದು, ತೀವ್ರ ರಕ್ತ ಸ್ರಾವದಿಂದ ಬೈಕ್ ಸವಾರ ಮತ್ತು ಇನ್ನೊಬ್ಬ ಸ್ಥಳದಲ್ಲೇ ಕೊನೆಯುಸಿರೆಳೆದಿರುವ ದುರ್ಘಟನೆ ಜಿಲ್ಲೆ ರಾಮದುರ್ಗ ತಾಲೂಕಿನ ಬಟಕುರ್ಕಿ ಗ್ರಾಮದಲ್ಲಿ ನಡೆದಿದೆ.

ಶಿವಾನಂದ ಖಾನಾಪುರ ಮತ್ತು ಮಲ್ಲಪ್ಪ ಕೌಜಲಗಿ ಮೃತರು. ಗೂಡ್ಸ್ ವಾಹನ ಪಲ್ಟಿಯಾಗಿದ್ದು, ನಾಲ್ವರಿಗೆ ಗಂಭೀರ ಗಾಯವಾಗಿದೆ ಎನ್ನಲಾಗಿದೆ. ಆನೆಗುಂದಿ ಗ್ರಾಮದಿಂದ ಲೋಕಾಪುರಕ್ಕೆ ತೆರಳುವ ವೇಳೆ ಬಟಕುರ್ಕಿ ಹತ್ತಿದ ರಸ್ತೆ ತಿರುವಿನಲ್ಲಿ ವಾಹನ ಬೈಕ್ ವೇಗವಾಗಿ ಡಿಕ್ಕಿ ಹೊಡೆದಿರುವ ಪರಿಣಾಮ ಬೈಕ್ ಮೇಲಿನ ಇಬ್ಬರು ಸ್ಥಳದಲ್ಲೆ ಮೃತಪಟ್ಟಿದ್ದಾರೆ.

ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಪೊಲೀಸ್ ಅಧಿಕಾರಿಗಳು ಘಟನೆ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

## ನಿಯಂತ್ರಣ ಘಟಕಕ್ಕೆ ಭೇಟಿ ನೀಡಿದ ಚುನಾವಣಾ ಸಾಮಾನ್ಯ ವೀಕ್ಷಕರು



ಬೆಳಗಾವಿ: 01-ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರಾದ ಜಿ. ಎಸ್.ಪಾಂಡಾ ದಾಸ್ ಅವರು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನಿಯಂತ್ರಣ ಘಟಕಕ್ಕೆ ಶನಿವಾರ (ಎ.20) ರಂದು ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ನಿಯಂತ್ರಣ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು. ಚೆಕ್ ಪೋಸ್ಟಗಳ ಮೇಲೆ ನಿರಂತರವಾಗಿ ನಿಗಾವಹಿಸಬೇಕು.

ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರವಾಗಿ ನಿಗಾವಹಿಸುವದರ ಜೊತೆಗೆ ಚುನಾವಣೆಗೆ ಸಂಬಂಧಿಸಿದ ದೂರು, ಮಾದರಿ ನೀತಿ ಸಂಹಿತೆ ಉಲ್ಲಂಘನೆಯಂತಹ ಪ್ರಕರಣಗಳು ಕಂಡು ಬಂದಲ್ಲಿ ಕೂಡಲೇ ಕ್ರಮ ವಹಿಸುವಂತೆ ಸೂಚಿಸಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾ-ರಿಗಳಾದ ರಾಹುಲ ಶಿಂಧೆ ಅವರು ನಿಯಂತ್ರಣ ಘಟಕದಲ್ಲಿನ ಕಾರ್ಯನಿರ್ವಹಿಸುತ್ತಿರುವ ಚೆಕ್ ಪೋಸ್ಟಗಳ ನಿಯಂತ್ರಣ, ಮಾಧ್ಯಮ ಕಣ್ಗಾವಲು ಘಟಕದ ಕಾರ್ಯ ವೈಖರಿಯ ಬಗ್ಗೆ ವೀಕ್ಷಕರಾದ ಜಿ. ಎಸ್.ಪಾಂಡಾ ದಾಸ್ ಅವರಿಗೆ ವಿವರಿಸಿದರು.

## ಮರಿಯಾನೆ ಸಾವು: ಮುಗಿಲು ಮುಟ್ಟಿದ ತಾಯಿಯ ಆಕ್ರಂದನ ಪೋಟೊ ವೈರಲ್



ಚಾಮರಾಜನಗರ: ಹುಲಿ ದಾಳಿಯಿಂದ ಮರಿ ಆನೆ ಸಾವಿಗೀಡಾದ ಘಟನೆ ಬಂಡೀಪುರ ಅರಣ್ಯದಲ್ಲಿ ನಡೆದಿದಿದೆ. ಇನ್ನು ತಾಯಿ ಆನೆಯು ಸಾವನ್ನಪ್ಪಿದ ಮರಿ ಆನೆಯ ಶವ ಬಿಟ್ಟು ಕದಲದೇ ಕಾದು ಕುಳಿತ್ತಿದ್ದು, ಈ ದೃಶ್ಯ ಮನಕಲಕುವಂತಿದೆ.

ಸಾಮಾನ್ಯವಾಗಿ ತಾಯಂದಿರು ತಮ್ಮ ಮಕ್ಕಳು ಹೇಗೆ ಇರಲಿ ಅವರ ಮೇಲೆ ತಮ್ಮ ಜೀವವನ್ನೇ ಇಟ್ಟುಕೊಂಡಿರುತ್ತಾರೆ.

ಹಾಗೆಯೇ ಕೆಲವೊಂದು ಪ್ರಾಣಿಗಳು ಕೂಡ ತಮ್ಮ ಮರಿಗಳ ರಕ್ಷಣೆ ಮಾಡುತ್ತವೆ.

ಇನ್ನು ಆನೆಗಳ ವಿಚಾರಕ್ಕೆ ಬಂದರೆ, ತನ್ನ ಮರಿಗಳೇನಾದರೂ ಕಾಣಲಿಲ್ಲ ಅಂದರೆ ಅವುಗಳ ವರ್ತನೆಯಲ್ಲಿ ಗಾಬರಿಯ ಲಕ್ಷಣಗಳು ಕಂಡು ಬರುತ್ತವೆ.

ಇನ್ನು ಇದೀಗ ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದಲ್ಲಿ ಹುಲಿ ದಾಳಿಯಿಂದ ಮರಿ ಆನೆ ಸಾವನ್ನಪ್ಪಿದೆ.

ಬಳಿಕ ಸ್ಥಳಕ್ಕೆ ಆಗಮಿಸಿದ ತಾಯಿ ಆನೆ ತನ್ನ ಮರಿಯ ಶವವನ್ನು ಬಿಟ್ಟು ಕದಲದೆ ಕಣ್ಣೀರಾಕುತ್ತಾ ಕುಳಿತಿರುವ ಮನಕಲಕುವ ದೃಶ್ಯ ಇದೀಗ ಎಲ್ಲೆಡೆ ವೈರಲ್ ಆಗುತ್ತಿದೆ. ಇನ್ನು ಇದನ್ನು ಕಂಡ ಸಾವಿರಾರು ಪ್ರಯಾಣಿಕರು, ಅಲ್ಲಿ ನೆರೆದಿದ್ದ ಜನರು ಕೂಡ ಕಣ್ಣಿ-ರಿಟ್ಟ ಘಟನೆ ನಡೆದಿದೆ.

ಮತ್ತೊಂದೆಡೆ ರಸ್ತೆ ಪಕ್ಕದಲ್ಲೇ ಆನೆ ಮರಿ ಸಾವನ್ನಪ್ಪಿರುವ ಹಿನ್ನೆಲೆ ಬಂಡೀಪುರ ಅರಣ್ಯ ವ್ಯಾಪ್ತಿಯ ಮೈಸೂರು ಊಟಿ ರಸ್ತೆ ಸಂಚಾರ ಅಸ್ತವ್ಯಸ್ತವಾಗಿದ್ದು, ವಾಹನಗಳು ಕಿಲೋಮೀಟರ್ ಗಟ್ಟಲೇ ಸಾಲುಗಟ್ಟಿ ನಿಂತಿರುವ ಘಟನೆ ಜರುಗಿದೆ. ಇನ್ನು ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಅರಣ್ಯಾಧಿಕಾರಿಗಳು ಹರಸಾಹಸಪಟ್ಟಿದ್ದಾರೆ.

# ವೆಂಕಟೇಶ ಕೆರೆಗೆ ಉಪವಿಭಾಗಾಧಿಕಾರಿ ಭೇಟಿ



ಮುಧೋಳ: ಇತ್ತೀಚೆಗೆ ಹಿಡಕಲ್ ಜಲಾಷಯದಿಂದ ಘಟಪ್ರಭಾ ನದಿಗೆ ಬಿಡಲಾದ ನೀರನ್ನು ಕಿನಾಲ್ ಮೂಲಕ ನಗರದ ರಾಜಾ ಮಾಲೋಜಿ-ರಾವ್ ಘೋರ್ಪಡೆ ಮಹಾರಾಜರು ಮುಧೋಳ ಜನತೆಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ನಿರ್ಮಿಸಿದ ಐತಿಹಾಸಿಕ ವೆಂಖಟೇಶ ಕೆರೆಗೆ ನೀರು ಹರಿಸುವ ಮೂಲಕ ತುಂಬಿಸಲಾಗಿದ್ದು, ಅಲ್ಲಿಗೆ ಜಮಖಂಡಿ ಉಪವಿಭಾಗಾಧಿಕಾರಿ ಸಂತೋಷ ಕಾಮಗೌಡ ಭೇಟಿ ನೀಡಿ ವೀಕ್ಷಿಸಿದರು.

ಸುಮಾರು 10 ದಿನಗಳಿಂದ ಹಿಡಕಲ್ ಜಲಾಷಯದಿಂದ ಬಂದ ನೀರನ್ನು ಮುಧೋಳ ಕೆರೆಗೆ ಹರಿಸಲು ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ಉಪವಿಭಾಗಾಧಿಕಾರಿ ಹಾಗೂ ಜಿಎಲ್‌ಬಿಸಿ ಅಧಿಕಾರಿಗಳು, ನಗರಸಭೆಯ ಪೌರಾಯುಕ್ತ ಗೋಪಾಲ ಕಾಸೆ ಸಿಬ್ಬಂದಿ ಸೇರಿದಂತೆ ಅನೇಕ ಅಧಿಕಾ-ರಿಗಳುಪೋಲಿಸ್ ಸಹಾಯದೊಂದಿಗೆ ಹರಸಾಹಸದಿಂದ ನೀರನ್ನು ಕೆರೆಯಲ್ಲಿ ಸಂಗ್ರಹಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಶತಮಾನಗಳ ಹಿಂದೆಯೇ ಆಗ ಮುಧೋಳದಲ್ಲಿರುವ ಸುಮಾರು ನಾಲ್ಕೈದು ಸಾವಿರ ಜನರಿಗೆ ಕುಡಿಯುವ ನೀರು ಪೂರೈಕೆಗಾಗಿ ಮಹಾರಾಜರು ಈ ಬೃಹತ್ ಕೆರೆಯನ್ನು ನಿರ್ಮಿಸಿದ್ದರು. ಮುಧೋಳ ಜನಸಂಖ್ಯೆ ಒಂದು ಲಕ್ಷದವರೆಗೆ ಏರಿದ್ದರೂ ಅದೊಂದೇ ಕೆರೆಯಿಂದ ಕುಡಿಯುವ ನೀರನ್ನು ಪೂರೈಸಬೇಕಾಗಿದೆ.

ಸುದ್ದಿಗಾರ ರೊಂದಿಗೆ ಪೌರಾಯುಕ್ತ ಗೋಪಾಲ ಕಾಸೆ ಮಾತನಾಡಿ, ಮಳೆಯಲ್ಲದೇ ಭೀಕರ ಬರಗಾಲದಿಂದಾಗಿ ಕೆರೆಯಲ್ಲಿ ನೀರು ಸಂಗ್ರಹಣೆ ಕಡಿಮೆಯಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರು ಕೆರೆಯನ್ನು ವೀಕ್ಷಿಸಿ ನಗರದ ಜನತೆಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಡಳಿತ ಹಾಗೂ ನಗರಸಭೆಗೆ ಸೂಚಿಸಿದ್ದರು. ಹೀಗಾಗಿ ನಗರದ ಜನತೆಗೆ ಕುಡಿಯುವ ನೀರು ಪೂರೈಕೆಗಾಗಿ ಎಲ್ಲೆಲ್ಲಿ ಸಮಸ್ಯೆ ಇದೆಯೋ ಬೋರವೆಲ್‌ಗಳನ್ನು ಕೊರೆಯಿಸಲಾಗಿದ್ದು, ದಾನಿಗಳಿಂದಲೂ ನೀರು ಪಡೆದು ಕುಡಿಯುವ ನೀರನ್ನು ಪೂರೈಕೆ ಮಾಡಲಾಗುತ್ತಿದೆ.

ಅಲ್ಲದೇ ಹಿಡಕಲ್ ಜಲಾಶಯದಿಂದ ಘಟಪ್ರಭಾ ನದಿಗೆ ಕುಡಿಯುವ ನೀರಿನ ಸಲುವಾಗಿ ಬಿಡಲಾದ ನೀರನ್ನು ಕೆರೆಯಲ್ಲಿ ತುಂಬಿಸುವ ನಿಟ್ಟಿನಲ್ಲಿ ಯುದ್ಧೋಪಾದಿಯಲ್ಲಿ ಸಂಬಂಧಿಸಿದ ಎಲ್ಲ ಇಲಾಖೆಗಳ ಮತ್ತು ರೈತರ ಸಹಕಾರದೊಂದಿಗೆ ರಾತ್ರಿ-ಹಗಲು ಕಾರ್ಯ ನಿರ್ವಹಿಸುವ ಮೂಲಕ ಕೆರೆಗೆ ನೀರು ಸಂಗ್ರಹಣೆ ಮಾಡಲಾಗಿದೆ. ಬೇಸಿಗೆಯಲ್ಲಿ ನೀರಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದ್ದು, ನೀರು ಜೀವ ಜಲವಾಗಿರುವುದರಿಂದ ಸಾರ್ವಜನಿಕರೂ ಸಹ ನೀರನ್ನು ಹಿತಮಿತವಾಗಿ ಬಳಸುವ ಮೂಲಕ ನೀರು ಪೋಲಾಗದಂತೆ ಸಹಕರಿಸಬೇಕೆಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಹಶೀಲದಾರ ವಿನೋದ ಹತ್ತಳ್ಳಿ, ನಗರಸಭೆ ಇಂಜನೀಯರುಗಳಾದ ರಾಜು ಚವ್ಹಾಣ, ಮಲ್ಲಪ್ಪ ಹೊಸೂರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಏ.28, 30ರಂದು ಬೆಳಗಾವಿ ಆಖಾಡಕ್ಕಿಳಿಯಲಿದ್ದಾರೆ ಸಿದ್ದರಾಮಯ್ಯ: ರಂಗೇರಲಿದೆ ಚುನಾವಣೆ ಕಣ

ಬೆಳಗಾವಿ: ಲೋಕಸಭಾ ಚುನಾವಣೆಗೆ ಇನ್ನು ಕೇವಲ 16 ದಿನ ಉಳಿದಿದೆ. ರಾಜಕೀಯ ಪಕ್ಷಗಳು ಈಗಾಗಲೆ 2 ಸುತ್ತಿನ ಪ್ರಚಾರ ಮುಗಿಸಿವೆ. ಇನ್ನೇನಿದ್ದರೂ ಸ್ಟಾರ್ ಪ್ರಚಾರಕರು, ನಾಯಕರ ನಿರೀಕ್ಷೆ.

ರಾಜ್ಯದಲ್ಲಿ ಮೊದಲ ಹಂತದ ಚುನಾವಣೆ ಏಪ್ರಿಲ್ 26ರಂದು ನಡೆಯಲಿದೆ, ಅಲ್ಲಿ ಏ.23ರಂದೇ ಬಹಿರಂಗ ಪ್ರಚಾರ ಅಂತ್ಯವಾಗಲಿದೆ. ಹಾಗಾಗಿ ಮೊದಲ ಹಂತದ ಚುನಾವಣೆ ನಡೆಯುವ ಕ್ಷೇತ್ರಗಳಲ್ಲಿ ಪ್ರಚಾರದಲ್ಲಿ ತೊಡಗಿಕೊಂಡವರು ಏ.24ರ ನಂತರ ಎರಡನೇ ಹಂತದ ಚುನಾವಣೆ ನಡೆಯಲಿರುವ ಉತ್ತರ ಕರ್ನಾಟಕಕ್ಕೆ ಲಗ್ಗೆ ಇಡಲಿದ್ದಾರೆ. ಆಗ ಚುನಾವಣೆ ಕಣ ನಿಜವಾಗಿಯೂ ರಂಗೇರಲಿದೆ.

ಸ್ಟಾರ್ ಪ್ರಚಾರಕರ ಪೈಕಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರವಾಸ ಪಟ್ಟಿ ಮೊಟ್ಟ ಮೊದಲಿಗೆ ಪ್ರಕಟವಾಗಿದೆ. ಏ.24ರಿಂದ ಅವರು ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಪ್ರವಾಸ ಮಾಡಲಿದ್ದಾರೆ.

ಏಪ್ರಿಲ್ 24ರಂದು ಕಲಬುರಗಿಗೆ ಆಗಮಿಸಲಿರುವ ಸಿದ್ದರಾಮಯ್ಯ, ಕಲಬುರಗಿ ಹಾಗೂ ಬೀದರ್ ಜಿಲ್ಲೆಯ ಅಫ್ಜಲ್ ಪುರ, ಆಳಂದ, ಬೀದರ್ ನಲ್ಲಿ ಪ್ರಚಾರ ಸಭೆಯಲ್ಲಿ ಭಾಗವಹಿಸುವರು. ಏಪ್ರಿಲ್ 25ರಂದು ಹುಬ್ಬಳ್ಳಿಗೆ ಆಗಮಿಸಲಿರುವ ಸಿದ್ದರಾಮಯ್ಯ, ನವಲಗುಂದ, ಗಜೇಂದ್ರಗಡ ಹಾಗೂ ಹುಬ್ಬಳ್ಳಿಯಲ್ಲಿ ಪ್ರಚಾರ ನಡೆಸುವರು.

ಏ.25ರ ರಾತ್ರಿ ಮೈಸೂರಿಗೆ ತೆರಳಿ 26ರಂದು ಮತದಾನ ಮಾಡಿದ ನಂತರ ಮಹಾರಾಷ್ಟ್ರದ ಸೊಲ್ಲಾಪುರಕ್ಕೆ ತೆರಳುವರು. ಅದೇ ದಿನ ಸಂಜೆ ಕಲಬುರಗಿಯಲ್ಲಿ ಪ್ರಚಾರ ಸಭೆಯಲ್ಲಿ ಭಾಗವಹಿಸುವರು. ಏ.27ರಂದು ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ, ಬಾಗಲಕೋಟೆ ಜಿಲ್ಲೆಯ ಬನಹಟ್ಟಿ ಹಾಗೂ ವಿಜಯಪುರದಲ್ಲಿ ಪ್ರಚಾರ ನಡೆಸುವರು.

**ಏ.28, 30ರಂದು ಬೆಳಗಾವಿ ಜಿಲ್ಲೆಯಲ್ಲಿ ಪ್ರಚಾರ**

ಏ.28ರಂದು ಅಥಣಿಗೆ ಆಗಮಿಸಿ ಬೆಳಗ್ಗೆ 11.30ಕ್ಕೆ ಉಗಾರಖುರ್ದದಲ್ಲಿ ಪ್ರಿಯಾಂಕಾ ಜಾರಕಿಹೊಳಿ ಪರ, ಮಧ್ಯಾಹ್ನ 2.30ಕ್ಕೆ ಯರಗಟ್ಟಿಯಲ್ಲಿ ಮೃಣಾಲ ಹೆಬ್ಬಾಳಕರ್ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಚುನಾವಣೆ ಪ್ರಚಾರ ಸಭೆಯಲ್ಲಿ ಭಾಗವಹಿಸುವರು.

ಅಂದು ಸಂಜೆ 6 ಗಂಟೆಗೆ ಸಿಂದನೂರಿನಲ್ಲಿ ಪ್ರಚಾರ ಸಭೆಯಲ್ಲಿ ಭಾಗವಹಿಸುವರು. 29ರಂದು ಕೂಡ್ಲಗಿ, ಕುಷ್ಟಗಿ ಹಾಗೂ ಬಾಗಲಕೋಟೆಯಲ್ಲಿ ಪ್ರಚಾರ ನಡೆಸುವರು.

30ರಂದು 11 ಗಂಟೆಗೆ ಚಿಕ್ಕೋಡಿಯಲ್ಲಿ ಪ್ರಿಯಾಂಕಾ ಜಾರಕಿಹೊಳಿ ಪರ, 2.45ಕ್ಕೆ ಗೋಕಾಕಲ್ಲಿ ಮೃಣಾಲ ಹೆಬ್ಬಾಳಕರ್ ಪರ ಸಿದ್ದರಾಮಯ್ಯ ಪ್ರಚಾರ ನಡೆಸಲಿದ್ದಾರೆ. ಅಂದು ಸಂಜೆ 5.45ಕ್ಕೆ ಗಂಗಾವತಿಯಲ್ಲಿ ಪ್ರಚಾರ ಸಭೆ ನಡೆಸುವರು.

ಸಿದ್ದರಾಮಯ್ಯ ಆಖಾಡಕ್ಕಿಳಿಯುವುದರಿಂದ ಚುನಾವಣೆ ಕಣ ರಂಗೇರಲಿದೆ. ವಿರೋಧಿಗಳ ವಿರುದ್ಧ ಒಂದೊಂದೇ ಅಸ್ತ್ರಗಳನ್ನು ಹೊರಗೆ ತೆಗೆಯುವ ಮೂಲಕ ಕಣದಲ್ಲಿ ಆರೋಪ ಪರತ್ಯಾರೋಪಗಳು ಜೋರಾಗಲಿವೆ.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸಿದ್ದರಾಮಯ್ಯ ಹೋದಲ್ಲೆಲ್ಲ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದೆ. ಮಾಸ್ ಲೀಡರ್ ಎಂದು ಕರೆಸಿಕೊಂಡಿರುವ ಸಿದ್ದರಾಮಯ್ಯ ಪ್ರಚಾರ ಸಭೆ ಎಂದರೆ ಜನರು ಕಿಕ್ಕಿರಿದು ಸೇರುತ್ತಾರೆ.

ಸಿದ್ದರಾಮಯ್ಯ ಪ್ರಚಾರದಿಂದ ಕಾಂಗ್ರೆಸ್ ನಲ್ಲಿ ಉತ್ಸಾಹ ಇಮ್ಮಡಿಗೊಂಡಿದೆ. ವಿಶೇಷವಾಗಿ ಬೆಳಗಾವಿಯಲ್ಲಿ ಸಿದ್ದರಾಮಯ್ಯ ಪ್ರವಾಸದಿಂದಾಗಿ ಕಾಂಗ್ರೆಸ್ ಗೆಲುವಿನ ಓಟಕ್ಕೆ ಶರವೇಗ ಸಿಗಲಿದೆ ಎಂದು ನಿರೀಕ್ಷಿಸಲಾಗಿದೆ.

## ಇಂದು ನೇಹಾ ಕೊಲೆಯ ಕುರಿತು ಸಭೆ

ಮುಧೋಳ: ದಿ.21 ರವಿವಾರದಂದು ನಗರದ ವೀರಶೈವ ಕಲ್ಯಾಣ ಮಂಟಪದ ಶ್ರೀ ದಾನಮ್ಮ ದೇವಸ್ಥಾನದಲ್ಲಿ ಹುಬ್ಬಳ್ಳಿಯಲ್ಲಿ ಕುಮಾರಿ ನೇಹಾ ಹಿರೇಮಠ ಅವರ ಬರ್ಬರ ಹತ್ಯೆ ಮಾಡಿದ್ದನ್ನು ಖಂಡಿಸಲು ವೀರಶೈವ ಲಿಂಗಾಯತ ಸಮಾಜ ಹಾಗೂ ಸರ್ವ ಹಿಂದು ಸಮಾಜದ ನೇತೃತ್ವದಲ್ಲಿ ಬೆಳಿಗ್ಗೆ 10 ಘಂಟೆಗೆ ಸಭೆಯನ್ನು ಕರೆಯಲಾಗಿದೆ.

ಸಮಸ್ತ ಹಿಂದು ಸಮಾಜದ ಪ್ರಮುಖರು ಹಾಗೂ ಮುಖಂಡರು ಭಾಗವಹಿಸಬೇಕೆಂದು ವೀರಶೈವ ಸಮಾಜದ ಪ್ರಮುಖರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಬಕಾರಿ ಇಲಾಖೆ: ಜಪ್ತಿಪಡಿಸಿದ ವಿವರ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಾದಾಗಿನಿಂದ ಬೆಳಗಾವಿ ಉತ್ತರ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಅಬಕಾರಿ ಅಧಿಕಾರಿಗಳಿಂದ 34 ದ್ವಿ–ಚಕ್ರ ವಾಹನ, 4 ಕಾರ್ ಹಾಗೂ 2 ಹೆವಿ ವಾಹನಗಳನ್ನು ಸೇರಿ 1,65,68,191 ಮೌಲ್ಯದ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಚುನಾವಣಾ ಆಯೋಗವು ನೀತಿ ಸಂಹಿತೆಯನ್ನು ಮಾ.16 ರಿಂದ ಜಾರಿಯಾದಗಿನಿಂದ ಏ.19 ವರೆಗೆ ಅಬಕಾರಿ ಉಪ ಆಯುಕ್ತರ ಕಚೇರಿಯು ಬೆಳಗಾವಿ ಉತ್ತರ ಜಿಲ್ಲೆ ಚಿಕ್ಕೋಡಿ ಜಿಲ್ಲಾ ವ್ಯಾಪ್ತಿಯಲ್ಲಿ ಅಬಕಾರಿ ಇಲಾಖೆಯು ಲೋಕಸಭಾ ಚುನಾವಣೆ–2024 ನಿಮಿತ್ಯ ಅಬಕಾರಿ ಅಕ್ರಮಗಳನ್ನು ತಡೆಗಟ್ಟಲು ಅಬಕಾರಿ ಅಧಿಕಾರಿಗಳು ದಾಳಿ, ಗಸ್ತು ಹಾಗೂ ರಸ್ತೆಗಾವಲುಗಳನ್ನು ಕೈಗೊಂಡು 57–ಘೋರ, 49–ಸಾಮಾನ್ಯ ಹಾಗೂ 362–15(ಎ) ಹೀಗೆ ಒಟ್ಟು 468 ಮೊಕದ್ದಮೆಗಳನ್ನು ದಾಖಲಿಸಿ 570 ಆರೋಪಿಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ.

18516.000 ಲೀಟರ್ ಭಾರತೀಯ ಮದ್ಯ, 73.000 ಲೀಟರ್ ಹೊರ ರಾಜ್ಯದ ಮದ್ಯ, 153 ಲೀಟರ್ ಶೇಂದಿ, 330 ಲೀಟರ್ ಕಳ್ಳಭಟ್ಟಿ ಸಾರಾಯಿ, 83.4 ಲೀಟರ್ ಬಿಯರ್ ಹಾಗೂ 34 ದ್ವಿ–ಚಕ್ರ ವಾಹನ, 4 ಕಾರ್ ಹಾಗೂ 2 ಹೆವಿ ವಾಹನಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಅಬಕಾರಿ ಪದಾರ್ಥಗಳ ಮತ್ತು ವಾಹನಗಳ ಮೌಲ್ಯವು 1,65,68,191 ಆಗಿರುತ್ತದೆ ಎಂದು ಬೆಳಗಾವಿ ಉತ್ತರ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಆಫೀಸ್‌ರಾದ ಪ್ರಶಾಂತಕುಮಾರ. ಕೆ ಅವರು ಪ್ರಕರಣದಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ನಗರದ ರೈಲು ನಿಲ್ದಾಣದ ಎದುರಿಗಿರುವ ಮಿಲಿಟರಿ ಬಾಲಕರ ವಸತಿ ನಿಲಯಕ್ಕೆ 2024–2025ನೇ ಶೈಕ್ಷಣಿಕ ವರ್ಷಕ್ಕೆ ಯುದ್ಧ ಸಂತ್ರಸ್ಥರು ಮತ್ತು ಮಾಜಿ ಸೈನಿಕರ ಮಕ್ಕಳಿಗೆ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಬೆಳಗಾವಿ ನಗರದ ಶೈಕ್ಷಣಿಕ ಸಂಸ್ಥೆಗಳಲ್ಲಿ 5ನೇ ತರಗತಿಯಿಂದ ಪಿಯುಸಿ, ಡಿಪ್ಲೋಮಾ ಹಾಗೂ ಐಟಿ–ಐದಲ್ಲಿ ವ್ಯಾಸಾಂಗಕ್ಕಾಗಿ ಪ್ರವೇಶವನ್ನು ಪಡೆದಿರಬೇಕು. ನಿಲಯದಲ್ಲಿ ಉಪಹಾರ, ಊಟ ಹಾಗೂ ವಸತಿ ಉಚಿತವಾಗಿರುತ್ತದೆ.

ಆಸಕ್ತರು ತಮ್ಮ ಮಕ್ಕಳಿಗೆ ನಿಲಯದ ಪ್ರವೇಶಕ್ಕೆ ಅರ್ಜಿಯನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ ಸಂಖ್ಯೆ 9449880818ಕ್ಕೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲವ್ ಜಿಹಾದ್ ನಿರಂತರವಾಗಿ ನಡೆಯುತ್ತಿದೆ: ಮನವಳ್ಳಿ ಪಟ್ಟಣದಲ್ಲಿ ಜಗದೀಶ್ ಶೆಟ್ಟರ್




ಬೆಳಗಾವಿ: ಲವ್ ಜಿಹಾದ್ ಹೆಸರಲ್ಲಿ ಒಂದು ಗುಂಪಿಗೆ ತರಬೇತಿ ಕೊಟ್ಟಿದ್ದಾರೆ. ಇದು ಎನ್‌ಐಎ ತನಿಖೆ ಆಗುವ ಮೂಲಕ ಮತಾಂತರ ಗುಂಪನ್ನು ಹೊರ ಹಾಕುವ ಕೆಲಸ ಮಾಡಬೇಕು. ಎನ್‌ಐಎ ಕೂಡ ಪ್ರಕರಣದ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ. ಇದರಲ್ಲಿ ಒಬ್ಬ ವ್ಯಕ್ತಿ ಇಲ್ಲಾ ಇನ್ನೂ ಐದು ಜನ ಆರೋಪಿ ಇದ್ದಾರೆ. ಆ ಐದು ಜನ ಆರೋಪಿಯನ್ನು ಕಾಂಗ್ರೆಸ್ ಸರ್ಕಾರ ಯಾವಾಗ ಅರೆಸ್ಟ್ ಮಾಡುತ್ತೀರಿ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಕಾಂಗ್ರೆಸ್ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸದಸ್ಯ ನಿರಂಜನ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಕಳೆದ ಮೂರು ದಿನಗಳಿಂದ ಮನವಳ್ಳಿಯಲ್ಲಿ ನಡೆಯುತ್ತಿದ್ದ ಬೃಹತ್ ಪ್ರತಿಭಟನೆಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ ಭಾಗವಹಿಸಿ, ಪ್ರತಿಭಟನಾಕಾರರಿಗೆ ಸಾಥ್ ನೀಡಿದರು. ಬಳಿಕ ಮಾತನಾಡಿದ ಅವರು, ಹುಬ್ಬಳ್ಳಿಯಲ್ಲಿ ನಡೆದ ಘಟನೆ ರಾಕ್ಷಸಿ ಪ್ರವೃತ್ತಿಯ ಘಟನೆ ಆಗಿದೆ. ಹಾಡಹಗಲೇ ಕಾಲೇಜಿನಲ್ಲಿ ಚಾಕುವಿನಿಂದ ಇರಿದು ವಿದ್ಯಾರ್ಥಿನಿಯನ್ನು ಕೊಂದು ಹಾಕಿದ್ದು ಎಲ್ಲರೂ ಖಂಡಿಸಬೇಕು. ಮುನವಳ್ಳಿಯಲ್ಲಿನ ಪ್ರತಿಭಟನೆ ಬಿಸಿ ಇಡೀ ರಾಜ್ಯಕ್ಕೆ ಹೋಗುತ್ತಿದೆ. ದೆಹಲಿಯಲ್ಲಿ ಇದೇ ರೀತಿ ಘಟನೆ ನಡೆದಿತ್ತು, ಈಗ ಹುಬ್ಬಳ್ಳಿಯಲ್ಲಿ ನಡೆದಿದೆ. ಇಂಥದೊಂದು ಗುಂಪಿಗೆ ತರಬೇತಿ ನೀಡಲಾಗಿದೆಯಾ ಅನ್ನೋ ಅನುಮಾನ ಮುಡುತ್ತಿದೆ ಎಂದು ಅನುಮಾನ ವ್ಯಕ್ತ ಪಡಿಸಿದರು.

ಸಿಎಂ, ಡಿಸಿಎಂ ವೈಯಕ್ತಿಕ ಕಾರಣ–ಕ್ಕೆ ಕೊಲೆ ಆಗಿದೆ ಅಂತಾರೆ. ಆದರೆ ಕಾಂಗ್ರೆಸ್ ಪಾಲಿಕೆ ಸದಸ್ಯನೇ ಹೇಳುವ ಪ್ರಕಾರ ಇದು ಲವ್ ಜಿಹಾದ್ ಕೇಸ್ ಆಗಿದೆ.

ಈ ವರೆಗೂ ಸಿಎಂ, ಡಿಸಿಎಂ, ಗೃಹಸಚಿವರು ಬಂದು ಯುವತಿ ಕುಟುಂಬಕ್ಕೆ ಸಾಂತ್ವಾನ ಯಾಕೆ ಹೇಳಿಲ್ಲ. ನೀವು ಒಂದು ಹೆಲಿಕಾಪ್ಟರ್ ತಗೊಂಡು ಹುಬ್ಬಳ್ಳಿಗೆ ಯಾಕೆ ಬರಲಿಲ್ಲ. ಅದೇ ಮುಸ್ಲಿಂ ಮಹಿಳಿಗೆ ಈ ರೀತಿ ಆಗಿದ್ರೆ ವಿಶೇಷ ವಿಮಾನ ತಗೊಂಡು ಬರುತ್ತಿದ್ದರಿ. ಆರೋಪಿ ವಿರುದ್ಧ ಕ್ರಮ ಕೈಗೊಳ್ಳಲು ನಿಮಗೆ ಗಡ್ಸ್ ಇಲ್ವಾ ಎಂದು ಕಾಂಗ್ರೆಸ್ ಸರ್ಕಾರ ವಿರುದ್ಧ ಗುಡಗಿದರು.

ನಿಮ್ಮ ತುಷ್ಟಿಕರಣ ನೀತಿ ನಿಲ್ಲಿಸಿ, ಇಲ್ಲ ಜನ ನಿಮ್ಮನ್ನು ಅಟ್ಟಾಡಿಸಿ ಹೊಡೆಯುವ ಪರಿಸ್ಥಿತಿ ಬರುತ್ತೆ. ಕೇರಳದ ವಯನಾಡ್ ನಲ್ಲಿ ಮುಸ್ಲಿಮರು ಜಾಸ್ತಿ ಇರೋದಕ್ಕೆ ಅಲ್ಲಿಗೆ ಹೋಗಿ ರಾಹುಲ್ ಗಾಂಧಿ ಚುನಾವಣೆ ಸ್ಪರ್ಧೆ ಮಾಡುತ್ತಾರೆ. ರಾಜ್ಯದಲ್ಲಿ ಮಹಿಳೆಯರು ಸ್ಕೂಲ್, ಕಾಲೇಜಿಗೆ ಹೋಗುವ ಪರಿಸ್ಥಿತಿ ಉಳಿದಿಲ್ಲ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉಳಿದಿಲ್ಲ. ಇನ್ನೂಳಿದ ಐದು ಜನರನ್ನು ಅರೆಸ್ಟ್ ಮಾಡಿ ಎನ್ಕೌಂಟರ್ ಮಾಡುವ ಕೆಲಸ ಮಾಡಿ.

ಯಾವಾಗ ಕಾಂಗ್ರೆಸ್ ಸರ್ಕಾರ ಬರುತ್ತೆ, ಆಗ ಹಿಂದು ಸಮಾಜ–ಕ್ಕೆ ತೊಂದರೆ ಕೊಡುವ ಕೆಲಸ ನಡೆದಿದೆ. ಲವ್ ಜಿಹಾದ್ ಅನ್ನೋದು ನಿರಂತರವಾಗಿ ನಡೆಯುತ್ತಿದೆ ಎಂದು ಜಗದೀಶ್ ಶೆಟ್ಟರ್ ವಾಗ್ದಾಳಿ ನಡೆಸಿದರು.

ಪ್ರತಿಭಟನೆ ನಡೆದ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ, ಮಂಡಲ ಅಧ್ಯಕ್ಷರಾದ ಈರಣ್ಣ ಚಂದ್ರಗಿ, ಪ್ರಮುಖರಾದ ಮಲ್ಲಣ್ಣ ಯಾದವಾಡ, ನರಸಿಂಹ ಕುಲಕರ್ಣಿ, ವಿಜಯ ಅವಟೆ, ಸುಭಾಷ ಗದ್ದಿಗೌಡ್ರ, ಪಂಚನಗೌಡ ದ್ಯಾಮಣ್ಣಗೌಡ್ರ, ಸೌರಭ ಚೋಪ್ರಾ ಸೇ–ರಿದಂತೆ ಅನೇಕ ಜನ ಉಪಸ್ಥಿತರಿದ್ದರು.

## ರಾಮತೀರ್ಥ ನಗರದಲ್ಲಿ ಚಾಯ್ ಪೆ ಚರ್ಚಾ ಮೂಲಕ ಮತಯಾಚಿಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಚಾಯ ಪೆ ಚರ್ಚಾ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ರಾಮತೀರ್ಥ ನಗರದಲ್ಲಿ ಮತಯಾಚಿಸಿದರು.

ಬೆಳ್ಳಂ ಬೆಳಗ್ಗೆ ರಾಮತಿರ್ಥ ನಗರದ ವಾರ್ಡ್ ನಂ 46ರ ವ್ಯಾಪ್ತಿಯ ಶಿವಾಲಯ ಗಾರ್ಡನ್ ಹತ್ತಿರ ಹಾಗೂ ಗಣೇಶ್ ಸರ್ಕಲ್ ಹತ್ತಿರ ಚಾಯ್ ಕುಡಿಯುದರ ಮೂಲಕ ಚರ್ಚಿಸಿ ಮತಯಾಚನೆ ಮಾಡಿದರು. ಈ ವೇಳೆ ಸ್ಥಳೀಯರು ಜಗದೀಶ್ ಶೆಟ್ಟರ್ ಅವರಿಗೆ ಮತ ನೀಡಿ ಗೆಲ್ಲಿಸುವದಾಗಿ ಭರವಸೆ ನೀಡಿದ್ದಾರೆ.

ಈ ವೇಳೆ ರಾಜ್ಯ ಬಿಜೆಪಿ ಉಪಾಧ್ಯಕ್ಷ ಅನಿಲ್ ಬೆನಕೆ, ವಾರ್ಡ್ ನಂ 46 ರ ಪಾಲಿಕೆ ಸದಸ್ಯ ಹಣಮಂತ ಕೊಂಗಾಲಿ, ಮಹಾನಗರ ಪ್ರಧಾನ ಕಾರ್ಯದರ್ಶಿ ಈರಯ್ಯ ಖೋತ, ಕೇದಾರ್ ಜೋರಾಪುರ್, ವಿಲಾಸ್ ಕೆರೂರ್, ಸಂತೋಷ್ ದೇಸಾಯಿ, ನವೀನ್ ಹಿರೇಮಠ, ಶಶಿ ಬಾಡ್ಕರ್, ಸಚಿನ್ ಮದ್ವಾಲ್, ಸುಧೀರ್, ಬಸವರಾಜ ಯರಗನವಿ, ಸಿ ಎಸ್ ಬಿಡ್ನಾಳ್, ಎಂ.ಟಿ ಪಾಟೀಲ್, ಚನ್ನಗೌಡ ಅಪ್ಪ ಸಾಬ್ ಮತ್ತು ಅಣ್ಣಸಾಬ ಜೈನ್ ರಾಜೇಂದ್ರ ಹಲಗಿ, ಡಾ. ಬಿದ್ರಿ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ನೇಹಾ ಹತ್ಯೆ ಖಂಡಿಸಿ ಬೆಳಗಾವಿಯಲ್ಲಿ ಪ್ರತಿಭಟನೆ



ಬೆಳಗಾವಿ: ಹುಬ್ಬಳ್ಳಿಯ ಖಾಸಗಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಆಗ್ರಹಿಸಿ ಶನಿವಾರ ಬೆಳಗಾವಿ ಜಿಲ್ಲಾ ಜಂಗಮ ಸಂಘಟನೆ ಹಾಗೂ ಶ್ರೀರಾಮ್ ಸೇನಾ ಹಿಂದೂಸ್ತಾನ್ ಸಂಘಟನೆಗಳು ಇಲ್ಲಿನ ಚನ್ನಮ್ಮ ವೃತ್ತದಲ್ಲಿ ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿ ಸರಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಎಂಸಿಎ ವಿಭಾಗದಲ್ಲಿಯೇ ಹಳೆ ವಿದ್ಯಾರ್ಥಿಯಾಗಿದ್ದ ಫಯಾಜ್ ಎಂಬ ಅನ್ಯಕೋಮಿನ ಯುವಕ ನೇಹಾಳ ಹಿಂದೆ ಬಿದ್ದು ಪ್ರೀತಿಸುವಂತೆ ಪೀಡಿಸುತ್ತಿದ್ದ ಗುರುವಾರ ಪರೀಕ್ಷೆ ಬರೆದು ಮನೆಗೆ ಹಿಂದಿರುಗಿ ಹೋಗುವಾಗ ನೇಹಾಳನ್ನು ಕಾಲೇಜ್ ಕ್ಯಾಂಪಸ್ ನಲ್ಲಿಯೇ ಚಾಕುವಿನ ಇರಿದು ಕೊಲೆ ಮಾಡಿದ್ದಾನೆ. ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಒತ್ತಾಸಿದರು.

ನೇಹಾಳ ಕೊಲೆ ಪ್ರಕರಣದಲ್ಲಿ ರಾಜಕೀಯ ಮಾಡುವುದು ಸರಿಯಲ್ಲ. ಇತ್ತೀಚಿನ ದಿನಗಳಲ್ಲಿ ಹಿಂದು ಧರ್ಮದ ಮಹಿಳೆಯರಿಗೆ ರಕ್ಷಣೆ ಇಲ್ಲವಾಗಿದೆ. ಇಂಥ ಕ್ರೂರಿಗಳಿಗೆ ಶಿಕ್ಷೆ ಕೊಡದಿದ್ದರೇ ಮುಂದ ನಮ್ಮ, ನಿಮ್ಮ ಮನೆಯಲ್ಲಿಯೂ ಇಂಥ ಘಟನೆ ನಡೆಯಬಹುದು.

ನೇಹಾ ಹಿರೇಮಠ ಕೊಲೆಗೈದ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ಮಹಾಂತೇಶ ರಣಗಟ್ಟಿಮಠ, ವೀರುಪಾಕ್ಷಿ ನೀರಲಗಿಮಠ, ಶಂಕ್ರಯ್ಯ ಹಿರೇಮಠ, ದಿಗ್ವಿಜಯ ಸಿದ್ನಾಳ,ಮಹಾಂತೇಶ ಒಕ್ಕುಂದ, ಮುರುಗೇಶ ಹಿರೇಮಠ, ರಮಾಕಾಂತ ಕೊಂಡುಸ್ಕರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಘೋಷಣೆ ಮಾಡಿದ ಆಕಾಶ್ ಬೈಜೂಸ್



ಬೆಳಗಾವಿ : ಆಕಾಶ್ ಬೈಜೂಸ್ ಏಪ್ರಿಲ್ 2024 ರಲ್ಲಿ ಆರಂಭವಾಗಲಿರುವ ವೈದ್ಯರು ಮತ್ತು ಎಂಜಿನಿಯರ್ ಗಳಾಗಬೇಕೆಂದು ಹೊತ್ತಿರುವ ಹಲವಾರು ವಿದ್ಯಾರ್ಥಿಗಳ ಕನಸನ್ನು ನನಸು ಮಾಡುವ ಉದ್ದೇಶದಿಂದ ವಿವಿಧ ವಿದ್ಯಾರ್ಥಿ ವೇತನಗಳನ್ನು ಪ್ರಕಟಿಸಿದೆ.

ವಿದ್ಯಾರ್ಥಿ ವೇತನವೆಂದರೆ ಇನ್ ಸ್ಟಂಟ್ ಅಡ್ಮಿಶನ್ ಕಮ್ ಸ್ಕಾಲರ್ ಶಿಪ್ ಟೆಸ್ಟ್ (iACST) ಆಗಿದೆ. ವೈದ್ಯಕೀಯ, ಎಂಜಿನಿಯರಿಂಗ್ ಮತ್ತು ಫೌಂಡೇಶನ್ ಕೋರ್ಸ್ ಗಳ ಪ್ರವೇಶಕ್ಕೆ ಶೇ.90 ರವರೆಗೆ ವಿದ್ಯಾರ್ಥಿವೇತನ ದೊರೆಯಲಿದೆ. ಇದಲ್ಲದೇ, ಆಕಾಶ್ ಬೈಜೂಸ್ ಹುತಾತ್ಮರಾದ ಯೋಧರು, ಸೇನಾ ಸಿಬ್ಬಂದಿ ಮತ್ತು ಭಯೋತ್ಪಾದಕ ದಾಳಿಗೆ ತುತ್ತಾದವರ ಮಕ್ಕಳಿಗೆ ವಿಶೇಷ ರಿಯಾಯ್ತಿಯನ್ನು ನೀಡುತ್ತಿದೆ

ಆಕಾಶ್ ಬೈಜೂಸ್ ನ ಚೀಫ್ ಬ್ಯುಸಿನೆಸ್ ಆಫೀಸರ್ ಅನೂಪ್ ಅಗರ್ವಾಲ್ ಮಾತನಾಡಿ, ದೇಶಾದ್ಯಂತ ವಿದ್ಯಾರ್ಥಿಗಳಿಗೆ ಸುಲಭವಾಗಿ ಪ್ರವೇಶಿಸಬಹುದಾದ ಮತ್ತು ಪರಿಣಾಮಕಾರಿ ಶೈಕ್ಷಣಿಕ ಅವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ನಾವು ಬದ್ಧರಾಗಿದ್ದೇವೆ.

iACST ಮತ್ತು ನಮ್ಮ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಂತಹ ಉಪಕ್ರಮಗಳ ಮೂಲಕ ಅರ್ಹ ವಿದ್ಯಾರ್ಥಿಗಳಿಗೆ ಅವರ ಶೈಕ್ಷಣಿಕ ಮತ್ತು ವೃತ್ತಿ ಆಕಾಂಕ್ಷೆಗಳನ್ನು ಪೂರೈಸಿಕೊಳ್ಳಲು ಅವಕಾಶ ಕಲ್ಪಿಸುವ ಗುರಿಯನ್ನು ನಾವು ಹೊಂದಿದ್ದೇವೆ ಎಂದು ತಿಳಿಸಿದರು.

ಇನ್ ಸ್ಟಂಟ್ ಅಡ್ಮಿಶನ್ ಕಮ್ ಸ್ಕಾಲರ್ ಶಿಪ್ ಟೆಸ್ಟ್ (iACST) 60 ನಿಮಿಷಗಳ ಪರೀಕ್ಷೆಯಾಗಿದ್ದು, ನಿಗದಿತ ದಿನಗಳಂದು ಬೆಳಗ್ಗೆ 10 ಗಂಟೆಯಿಂದ ರಾತ್ರಿ 8 ಗಂಟೆಯೊಳಗೆ ಪರೀಕ್ಷೆಯನ್ನು ಬರೆಯಲು ಅವಕಾಶವಿದೆ. 8 ರಿಂದ 12 ನೇ ತರಗತಿಯ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ವೈದ್ಯಕೀಯ ಅಥವಾ ಎಂಜಿನಿಯರಿಂಗ್ ನಲ್ಲಿ ತಮ್ಮ ವೃತ್ತಿಜೀವನದ ಸಾಮಥ–ರ್ಥ್ಯವನ್ನು ಪ್ರದರ್ಶಿಸಲು iACST ಒಂದು ವೇದಿಕೆಯಾಗಿ ಕಾರ್ಯ ನಿರ್ವಹಿಸುತ್ತದೆ ಎಂದು ಹೇಳಿದರು.

2024 ರಿಂದ ಇದುವರೆಗೆ ಈ ವಿದ್ಯಾರ್ಥಿವೇತನದಿಂದ 75.000 ಕ್ಕೂ ಅಧಿಕ ವಿದ್ಯಾರ್ಥಿಗಳು ಪ್ರಯೋಜನ ಪಡೆದಿದ್ದಾರೆ.

ಇತ್ತೀಚೆಗೆ ನಡೆದ ಜೆಇಇ ಮೇನ್ಸ್ 2024 ಪರೀಕ್ಷೆಯಲ್ಲಿ ಆಕಾಶ್ ಬೈಜೂಸ್ ನ 41.263 ವಿದ್ಯಾರ್ಥಿಗಳು ಅರ್ಹತೆ ಪಡೆಯುವ ಮೂಲಕ ಸಂಸ್ಥೆಯು ಯಶಸ್ಸಿನ ಮತ್ತೊಂದು ಮೆಟ್ಟಿಲೇ–ರಿದೆ. ಇವರ ಪೈಕಿ ಸಂಸ್ಥೆಯ 4.198 ವಿದ್ಯಾರ್ಥಿಗಳು ಶೇ.95 ಮತ್ತು ಅದಕ್ಕಿಂತ ಹೆಚ್ಚು ಅಂಕ ಪಡೆದುಕೊಂಡಿದ್ದರೆ, 939 ವಿದ್ಯಾರ್ಥಿಗಳು ಶೇ.99 ಮತ್ತು ಅದಕ್ಕಿಂತ ಹೆಚ್ಚು ಅಂಕ ಪಡೆದು ಹಿರಿಮೆ ತಂದಿದ್ದಾರೆ.

ಹೈದ್ರಾಬಾದ್ ನ ರಿಷಿ ಶೇಖರ್ ಶುಕ್ಲಾ ಅವರು ಶೇ.100 ಅಂಕ ಪಡೆದು ಟಾಪರ್ ಆಗಿದ್ದರೆ, ಕರ್ನಾಲ್ ನ ಅಭಿರಾಜ್ ಸಿಂಗ್, ತ್ರಿನುಲ್ವೇಲಿಯ ಶ್ರೀರಾಂ ಮತ್ತು ಹೈದ್ರಾಬಾದ್ ನ ವಿಶ್ವನಾಥ್ ಕೆ.ಎಸ್. ಅವರು ಶೇ.99.99 ಅಂಕ ಪಡೆದು ಸಂಸ್ಥೆಗೆ ಹೆಮ್ಮೆ ಬರುವಂತೆ ಮಾಡಿದ್ದಾರೆ.

ಕ್ಲಾಸ್ ರೂಂ ವಿದ್ಯಾರ್ಥಿಗಳಲ್ಲದೇ, ಆಕಾಶ್ ಬೈಜೂಸ್ ನ ಡಿಜಿಟಲ್ ಪ್ರೋಗ್ರಾಂನ ವಿದ್ಯಾರ್ಥಿಗಳು ಜೆಇಇ ಮೇನ್ಸ್ 2024 (ಸೆಶನ್ –01) ರಲ್ಲಿ ಉತ್ತಮ ಸಾಧನೆ ತೋರಿದ್ದಾರೆ. ಗಣಿತದಲ್ಲಿ 100 ಅಂಕಗಳೊಂದಿಗೆ ರೀತಂ ಬ್ಯಾನರ್ಜಿ ಒಟ್ಟಾರೆ ಶೇ.99.96 ಅಂಕ ಪಡೆಯುವುದರೊಂದಿಗೆ ಈ ವಿಭಾಗದಲ್ಲಿ ಟಾಪರ್ ಆಗಿದ್ದಾರೆ.

ಇನ್ನು NEET-UG ಪರೀಕ್ಷೆ 2023 ರಲ್ಲಿ ಆಕಾಶ್ ಬೈಜೂಸ್ ನ 1.06.870 ವಿದ್ಯಾರ್ಥಿಗಳು ಅರ್ಹತೆ ಪಡೆದಿರುವುದು ಒಂದು ಮೈಲಿಗಲ್ಲಾಗಿದೆ. ಇವರಲ್ಲಿ 17 ಮಂದಿ ವಿದ್ಯಾರ್ಥಿಗಳು ರಾಜ್ಯಗಳು/ ಕೇಂದ್ರಾಡಳಿತ ಪ್ರದೇಶಗಳಿಗೆ ಟಾಪರ್ ಗಳಾಗಿ ಹೊರಹೊಮ್ಮಿದ್ದಾರೆ.

ಆಲ್ ಇಂಡಿಯಾ ರ್ಯಾಂಕಿಂಗ್ ಅಂದರೆ AIR ನಲ್ಲಿ ಮೂರನೇ ಟಾಪರ್, ಕೌಸ್ತುಭ್ ಬೌರಿ, ಧೃವ್ ಅಡ್ವಾಣಿ 5 ನೇ ಟಾಪರ್, ಸೂರ್ಯ ಸಿದ್ಧಾ ರ್ಥ್ ನಾಗರಾಜನ್ 6 ನೇ ಟಾಪರ್, ಸ್ವಯಂ ಶಕ್ತಿ ತ್ರಿಪಾಠಿ 8 ನೇ ಟಾಪರ್ ಮತ್ತು ಪಾರ್ಥ್ ಖಂಡೇಲ್ವಾಲ್ 10 ನೇ ಟಾಪರ್ ಆಗಿ ಹೊರಹೊಮ್ಮಿದ್ದಾರೆ.

ಈ ಸಂರ್ಬದಲ್ಲಿ ವಿಜಯಕುಮಾರ್ ಚೀಮಕುರ್ತಿ,ಗಿರೀಶ್ ದುರ್ಗದಮಠ, ಆಸೀಫಲಿ ಅಂಗಡಿ, ಜಗದೀಶ ಖಂಡ್ರೆ ಇದ್ದರು.

## ಕೊಗನೊಳಿ ಚೆಕ ಪೋಸ್ಟಗೆ ಭೇಟಿ ನೀಡಿ ಪರಿಶೀಲಿಸಿದ ಚುನಾವಣಾ ವೀಕ್ಷಕರು



ಚಿಕ್ಕೋಡಿ: 01–ಚಿಕ್ಕೋಡಿ ಲೋಕ ಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರಾದ ಜಿ.ಎಸ್. ಪಾಂಡಾ ದಾಸ್ ಅವರು ಶನಿವಾರ (ಏ.20) ರಂದು ಕೊಗನೊಳಿ ಚೆಕನಪೋಸ್ಟಗೆ ಅನೀ–ರಿಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಿದರು.

ಚೆಕಪೋಸ್ಟನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳ ಮಾಹಿತಿ ಪಡೆದ ಅವರು ಚುನಾವಣಾ ಅಕ್ರಮಗಳನ್ನು ತಡೆಗಟ್ಟುವಲ್ಲಿ ಚೆಕ್ ಪೋಸ್ಟಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಜವಾಬ್ದಾರಿ ಅತೀ ಪ್ರಮುಖವಾಗಿರುತ್ತದೆ.

ಚೆಕ್ ಪೋಸ್ಟಗಳಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು. ತಮ್ಮ ಕಾರ್ಯದಲ್ಲಿ ಉದಾಸೀನತೆ, ಅಜಾಗರೂಕತೆ ತೋರದಂತೆಚುನಾವಣಾ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

## ವಿಕಲಚೇತನರ ಬೈಕ್ ಜಾಥಾಗೆ ಚಾಲನೇ ನೀಡಿದ ಚಿಕ್ಕೋಡಿ ಚುನಾವಣಾಧಿಕಾರಿ ರಾಹುಲ ಶಿಂಧೆ



ಬೆಳಗಾವಿ: ಭಾರತದ ಸಂವಿಧಾನ ಜಾತಿ, ಧರ್ಮ, ಬಡವ ಶ್ರೀಮಂತ ಎನ್ನದೆ ಎಲ್ಲರಿಗೂ ಸಮಾನತೆಯಿಂದ ಮತ ಚಲಾಯಿಸುವ ಹಕ್ಕು ನೀಡಿದೆ. ಆ ನಿಟ್ಟಿನಲ್ಲಿ ಮೇ 07 ರಂದು ಜರುಗಲಿರುವ ಚುನಾವಣೆಯಲ್ಲಿ ಪ್ರತಿಯೊಬ್ಬರು ತಮ್ಮ ಮತದಾನದ ಹಕ್ಕನ್ನು ಕಡ್ಡಾಯವಾಗಿ ಚಲಾಯಿಸುವ ಮೂಲಕ ಸಧೃಡ ರಾಷ್ಟ್ರ ನಿರ್ಮಾಣ ಮಾಡಲು ಮುಂದಾಗ ಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ.ಸಿ.ಇ.ಓ ರಾಹುಲ ಶಿಂಧೆ ಅವರು ಕರೆ ನೀಡಿದರು.

ಚಿಕ್ಕೋಡಿ ತಾ.ಪಂ. ಕಚೇರಿ ಆವರಣದಲ್ಲಿ ಶನಿವಾರ (ಏ.20) ರಂದು ಮತದಾನ ಜಾಗೃತಿಗಾಗಿ ಹಮ್ಮಿಕೊಳ್ಳಲಾಗಿದ್ದ ವಿಕಲಚೇತನರ ಬೈಕ್ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು, ಅರ್ಹ ಮತದಾರರು ತಪ್ಪದೇ ಮತ ಚಲಾಯಿಸುವುದ–ರಿಂದ ಪ್ರಜಾಪ್ರಭುತ್ವ ಗಟ್ಟಿಗೊಳ್ಳುತ್ತದೆ. ಹಾಗಾಗಿ ಎಲ್ಲರೂ ತಪ್ಪದೇ ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದರು.

ದೇಶದಲ್ಲಿ ಉತ್ತಮ ಆಡಳಿತ ವ್ಯವಸ್ಥೆ ಹೊಂದಲು ಮತದಾರರ ಪಾತ್ರ ತುಂಬ ಮಹತ್ವದಾಗಿರುತ್ತದೆ. ಪ್ರತಿಯೊಬ್ಬ ಅರ್ಹ ಮತದಾರರು ಮತದಾನ ದಿನದಂದು ತಮ್ಮ ಮತದಾನದ ಹಕ್ಕನ್ನು ತಪ್ಪದೇ ಚಲಾಯಿಸಬೇಕು. ಎಂಭೈತ್ತೈದು ವರ್ಷ ಮೇಲ್ಪಟ್ಟ ವಯೋವೃದ್ಧರಿಗಾಗಿ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಮೇ.7 ರಂದು ಜರುಗಲಿರುವ ಮತದಾನದ ದಿನದಂದು ಅರ್ಹ ಮತದಾರರೆಲ್ಲರೂ ಉದಾಸೀನ ಮನೋಭಾವ ತೋರದೆ ತಮ್ಮ ವ್ಯಾಪ್ತಿಯಲ್ಲಿನ ಮತಗಟ್ಟೆಗಳಿಗೆ ತೆರಳಿ ಕಡ್ಡಾಯವಾಗಿ ಮತದಾನ ಮಾಡುವದರ ಜೊತೆಗೆ ತಮ್ಮ ಅಕ್ಕ, ಪಕ್ಕದವರಿಗೂ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿ ಮತ ಚಲಾಯಿಸಲು ಪ್ರೇರೇಪಿಸಬೇಕು. ಮತದಾನದ ದಿನದಂದು ಮತಗಟ್ಟೆಗಳಲ್ಲಿ ಕುಡಿಯುವ ನೀರು, ಕಾಯುವಿಕೆ ಸ್ಥಳ ಸೇರಿದಂತೆ ಅಗತ್ಯದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಅರ್ಹ ಮತದಾರರೆಲ್ಲರೂ ಮತದಾನದ ದಿನದಂದು ತಪ್ಪದೇ ಮತಗಟ್ಟೆಗಳಿಗೆ ಆಗಮಿಸಿ ಭಾರತದ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ಚಲಾಯಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಕರೇ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ರಾಯಭಾರಿ ರಾಘವೇಂದ್ರ ಅನ್ವೇಕರ, ಜಿ.ಪಂ ಯೋಜನಾ ನಿರ್ದೇಶಕ ಕೃಷ್ಣರಾಜ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಗಂಗಮ್ಮ ಹಿರೇಮಠ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ವಿಕಲಚೇತನರು ಉಪಸ್ಥಿತರಿದ್ದರು. ಚಿಕ್ಕೋಡಿ ತಾ.ಪಂ.ಇ.ಓ.ಜಗದೀಶ ಕಮ್ಮಾರ ಅವರು ಮತದಾನ ಜಾಗೃತಿ ಕುರಿತು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಜಾನಪದ ಕಲಾತಂಡಗಳೊಂದಿಗೆ ತಾಲೂಕು ಪಂಚಾಯತ ಆವರಣದಿಂದ ಪ್ರಾರಂಭಗೊಂಡು ಬೈಕ ಜಾಥ–ವು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089